ವಿಜಯಪುರ | ಸಂಪುಟ 04 | ಸಂಚಿಕೆ 181 | ಪುಟ 04 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ

Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಸೆಪ್ಟೆಂಬರ್, 10, 2026

"ಅಣ್ತಮ್ಮಾ ಜನಾರ್ದನರೆಡ್ಡಿ, ಮತ್ತದೇ ಪೊಳ್ಳು ನುಡಿಗಳ ಮೊರೆ ಹೋಗಿದ್ದೀಯ. ನಾನು ನನ್ನ ಸ್ವಂತ ಆಸ್ತಿ ಮಾರಿಕೊಂಡು ಚುನಾವಣೆ ಎದುರಿಸಿದವನು. ಚುನಾವಣೆಗಾಗಿ ಯಾರ ಮುಂದೆಯೂ ಕೈ ಚಾಚಿದವನಲ್ಲ. ಅದು ನಿನಗೂ ಚೆನ್ನಾಗಿ ಗೊತ್ತಿದೆ."



■ ಶಿವರಾಜ ತಂಗಡಗಿ
ಸಚಿವರು

# ಹುಳುಗಳಿದ್ದ ಉಪಹಾರ; ನಗರ ಸಂರಕ್ಷಕರಿಗೆ ಪುರಸಭೆಯ ವಿಷಾಹಾರ!

■ ಉದಯರಶ್ಮಿ ದಿನಪತ್ರಿಕೆ

ಕಲಬುರಗಿ: ಜಿಲ್ಲೆಯ ಅಫಜಲಪುರ ಪಟ್ಟಣದ ಸ್ವಚ್ಛತೆ ಕಾಪಾಡುವ ಪೌರಕಾರ್ಮಿಕರಿಗೆ ಪುರಸಭೆಯಿಂದ ವಿತರಿಸಲಾಗುವ ಬೆಳಗಿನ ಉಪಹಾರದಲ್ಲಿ ಹುಳುಗಳು ಪತ್ತೆಯಾಗಿರುವ ಆಘಾತಕಾರಿ ಘಟನೆ ಬೆಳಕಿಗೆ ಬಂದಿದೆ.

ಸಾರ್ವಜನಿಕರ ಆರೋಗ್ಯ ರಕ್ಷಣೆಗೆ ಹಗಲಿರುಳು ಶ್ರಮಿಸುವ ಕಾರ್ಮಿಕರಿಗೆ ಅತ್ಯಂತ ಕಳಪೆ ಮತ್ತು ಅಸುರಕ್ಷಿತ ಆಹಾರ ನೀಡುತ್ತಿರುವುದು ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.


**ಘಟನೆಯ ವಿವರ:** ಅಫಜಲಪುರ ಪುರಸಭೆ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುವ ಪೌರಕಾರ್ಮಿಕರಿಗೆ ಸರ್ಕಾರಿ ನಿಯಮಾವಳಿಗಳ ಅನ್ವಯ ಪ್ರತಿದಿನ ಬೆಳಗಿನ ಉಪಹಾರ ಪೂರೈಸಲಾಗುತ್ತಿದೆ. ಎಂದಿನಂತೆ ಕರ್ತವ್ಯ ಮುಗಿಸಿ ಉಪಹಾರ ಸೇವಿಸಲು ಪೊಟ್ಟಣಗಳನ್ನು ತೆರೆದಾಗ, ಆಹಾರದಲ್ಲಿ ಸಣ್ಣ ಸಣ್ಣ ಹುಳುಗಳು ಜೀವಂತವಾಗಿರುವುದು ಕಂಡುಬಂದಿದೆ. ಇದರಿಂದ ಬೆಚ್ಚಿಬಿದ್ದ ಕಾರ್ಮಿಕರು ತಕ್ಷಣವೇ ಆಹಾರ ಸೇವಿಸುವುದನ್ನು ನಿಲ್ಲಿಸಿ, ಪುರಸಭೆ ಅಧಿಕಾರಿಗಳ ಗಮನಕ್ಕೆ ತಂದಿದ್ದಾರೆ.

## ಗುತ್ತಿಗೆ ರದ್ದು ಮತ್ತು ಬ್ಲ್ಯಾಕ್‌ಲಿಸ್ಟ್

ಕಾರ್ಮಿಕರ ಜೀವದೊಂದಿಗೆ ಚೆಲ್ಲಾಟವಾಡುತ್ತಿರುವ ಏಜೆನ್ಸಿಯ ಲೈಸೆನ್ಸ್ ರದ್ದುಪಡಿಸಿ, ಕಪ್ಪುಪಟ್ಟಿಗೆ (ಃಟಚಿಛಿಞಟಿ್ಟುಣ) ಸೇರಿಸಬೇಕು ಹಾಗೂ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ಬಡ ಕಾರ್ಮಿಕರ ಆರೋಗ್ಯದ ಜೊತೆ ಆಟವಾಡುವ ಇಂತಹ ಬೇಜವಾಬ್ದಾರಿ ಗುತ್ತಿಗೆದಾರರ ವಿರುದ್ಧ ಜಿಲ್ಲಾಡಳಿತ ಕಠಿಣ ಕ್ರಮ ಕೈಗೊಳ್ಳಬೇಕೆಂಬ ಕೂಗು ತಾಲೂಕಿನಲ್ಲಿ ತೀವ್ರಗೊಂಡಿದೆ.

ಘಟನೆ ಗಂಭೀರ ಸ್ವರೂಪ ಪಡೆದುಕೊಳ್ಳುತ್ತಿದ್ದಂತೆ ಎಚ್ಚೆತ್ತ ಅಫಜಲಪುರ ಪುರಸಭೆಯ ಮುಖ್ಯ ಅಧಿಕಾರಿಗಳು (Chief Officer) ತಕ್ಷಣ ಕ್ರಮಕ್ಕೆ ಮುಂದಾಗಿದ್ದಾರೆ. ಸಂಬಂಧಪಟ್ಟ ಸರಬರಾಜುದಾರರಾದ 'ಮಂಗಳಾ ಕರಜಗಿ ಏಜೆನ್ಸಿ'ಗೆ ಅಧಿಕೃತವಾಗಿ ಕಾರಣ ಕೇಳಿ ನೋಟಿಸ್ (Show Cause Notice) ಜಾರಿಗೊಳಿಸಲಾಗಿದೆ. ಕಳಪೆ ಆಹಾರ ಸರಬರಾಜು ಮಾಡಿದ ಬಗ್ಗೆ ಸಮರ್ಪಕ ವಿವರಣೆ ನೀಡುವಂತೆ ಹಾಗೂ ಗುಣಮಟ್ಟ ಕಾಪಾಡದಿದ್ದಲ್ಲಿ ಗುತ್ತಿಗೆ ರದ್ದುಪಡಿಸಿ ಕಾನೂನು ಕ್ರಮ ಜರುಗಿಸುವ ಎಚ್ಚರಿಕೆ ನೀಡಲಾಗಿದೆ.

ಈ ಘಟನೆಯು ಕೇವಲ ಅಫಜಲಪುರ ಪುರಸಭೆಗೆ ಮಾತ್ರ ಸೀಮಿತವಾಗಿರದೆ, ದೊಡ್ಡ ಜಾಲದ ಭಾಗವಾಗಿರುವ ಶಂಕೆ ವ್ಯಕ್ತವಾಗಿದೆ. ಸಾರ್ವಜನಿಕರು ಹಾಗೂ ಕಾರ್ಮಿಕ ಸಂಘಟನೆಗಳು ಈ ಕೆಳಗಿನ ಪ್ರಮುಖ ಅಂಶಗಳ ಕುರಿತು ಉನ್ನತ ಮಟ್ಟದ ತನಿಖೆಗೆ ಆಗ್ರಹಿಸಿವೆ.ಇತರೆಡೆಗಳಲ್ಲೂ ಇದೇ ರೀತಿಯ ಕಳಪೆ ಹಾಗೂ ಹುಳು ಬಿದ್ದ ಆಹಾರ ಸರಬರಾಜು ಮಾಡಲಾಗುತ್ತಿದೆಯೇ ಎಂಬುದನ್ನು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ (FSSAI) ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಲ್ಯಾಬ್ ಪರೀಕ್ಷೆಗೆ ಕಳುಹಿಸಬೇಕೆಂಬುದು ಸಂಘಟನೆಗಳ ಒತ್ತಾಯವಾಗಿದೆ.



## ಆಹಾರ ಪೂರೈಕೆ ಹಿನ್ನೆಲೆ ಮತ್ತು ಗುತ್ತಿಗೆದಾರರ ವಿವರ

ಏಜೆನ್ಸಿ ಹೆಸರು: ಮಂಗಳಾ ಕರಜಗಿ ಏಜೆನ್ಸಿ, ಕಲಬುರಗಿ. ಸರಬರಾಜು ವ್ಯಾಪ್ತಿ: ಈ ಏಜೆನ್ಸಿಯು ಕಲಬುರಗಿಯಿಂದ ಅಫಜಲಪುರ ಪುರಸಭೆಗೆ ಉಪಹಾರವನ್ನು ನಿತ್ಯ ಸಾಗಾಟ ಮಾಡಿ **ಪೂರೈಸುತ್ತಿದೆ.ದೂರು:** ಆಹಾರದ ಗುಣಮಟ್ಟ ಅತ್ಯಂತ ಕಳಪೆಯಾಗಿದ್ದು, ಸ್ವಚ್ಛತೆ ಹಾಗೂ ಸುರಕ್ಷತಾ ಮಾನದಂಡಗಳನ್ನು ಸಂಪೂರ್ಣವಾಗಿ ಗಾಳಿಗೆ ತೂರಲಾಗಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ.

■ ಅಫಜಲಪುರ ಪುರಸಭೆ ಪೌರಕಾರ್ಮಿಕರ ಉಪಹಾರದಲ್ಲಿ ಹುಳು ಪತ್ತೆ | ಗುತ್ತಿಗೆ ಏಜೆನ್ಸಿಗೆ ನೋಟಿಸ್ | ಸಮಗ್ರ ತನಿಖೆಗೆ ಕಾರ್ಮಿಕರ ಆಗ್ರಹ

ಅಬಕಾರಿ ಅಕ್ರಮ ಕೇಸ್ | ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸಂಬಂಧಿಕರ ಆಸ್ತಿಗಳ ಮೇಲೂ ದಾಳಿ | ಅಬಕಾರಿ ಇಲಾಖೆಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ದಸಈ ದಾಳಿ

# ಸಚಿವ ಜಾರಕಿಹೊಳಿ ಮನೆ ಮೇಲೆ ಇಡಿ ದಿಢೀರ್ ದಾಳಿ



ಬೆಂಗಳೂರು: ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ಬೆಂಗಳೂರಿನ ಡಾಲರ್ಸ್ ಕಾಲೋನಿ ನಿವಾಸದ ಮೇಲೆಯೇ ಬೆಳ್ಳಂಬೆಳಗ್ಗೆ ಇಡಿ ಅಧಿಕಾರಿಗಳು ದಿಢೀರ್ ದಾಳಿ ನಡೆಸಿ ಬಿಗ್ ಶಾಕ್ ನೀಡಿದ್ದಾರೆ

ಬೆಂಗಳೂರು, ಬೆಳಗಾವಿ, ಮಹಾರಾಷ್ಟ್ರ ಸೇರಿದಂತೆ 15 ಕಡೆ ದಾಳಿ ನಡೆದಿದೆ. 18 ಅನಧಿಕೃತ ಲೈಸೆನ್ಸ್ ಕೊಡುವುದಕ್ಕೆ ಸತೀಶ್ ಜಾರಕಿಹೊಳಿ ಸಹಾಯ ಮಾಡಿದ್ದರೆಂಬ ಆರೋಪ ಕೇಳಿ ಬಂದಿದೆ.

ಲೋಕೋಪಯೋಗಿ ಇಲಾಖೆ (ಕಫಅ) ಸಚಿವ ಸತೀಶ್ ಜಾರಕಿಹೊಳಿ ಅವರ ಬಾಮೈದ, ಅಬಕಾರಿ ಇಲಾಖೆಯ ಜಂಟಿ ಆಯುಕ್ತ ವೈ. ಮಂಜುನಾಥ್ ಅವರ ಆಸ್ತಿಗಳ ಮೇಲೆ ಜಾರಿ ನಿರ್ದೇಶನಾಲಯ (ಇಅ) ಹಲವು ಕಡೆ ದಾಳಿ ನಡೆಸಿದ ಕೆಲವೇ ವಾರಗಳ ಬಳಿಕ, ಇದೀಗ ಸ್ವತಃ ಸತೀಶ್ ಜಾರಕಿಹೊಳಿಗೆ ಸಂಬಂಧಿಸಿದ ಸುಮಾರು 18 ಸ್ಥಳಗಳ ಮೇಲೆ ಇಡಿ ಅಧಿಕಾರಿಗಳು ಇಂದು ಬುಧವಾರ ಬೆಳಗ್ಗೆ ಶೋಧ ನಡೆಸಿದ್ದಾರೆ. ಬೆಂಗಳೂರಿನ ಡಾಲರ್ಸ್ ಕಾಲನಿಯಲ್ಲಿರುವ ಸಚಿವರ ನಿವಾಸ, ಸರ್ಕಾರಿ ವಸತಿ ಗೃಹಗಳು ಹಾಗೂ ಬೆಳಗಾವಿ ಮತ್ತು ಗೋಕಾಕ್‌ನಲ್ಲಿರುವ ಆಸ್ತಿಗಳ ಮೇಲೂ ಶೋಧ ನಡೆಸಲಾಗಿದೆ. ಬಾರ್ ಲೈಸೆನ್ಸ್‌ಗಳ ವಿತರಣೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳು ಸೇರಿದಂತೆ ವಿವಿಧ ವಿಚಾರಗಳ ಕುರಿತು ನಡೆಯುತ್ತಿರುವ ತನಿಖೆಯ ಭಾಗವಾಗಿ ಈ ದಾಳಿ ನಡೆದಿದೆ ಎನ್ನಲಾಗಿದೆ.

ಬುಧವಾರ ಮುಂಜಾನೆಯಿಂದ ಆರಂಭವಾದ ಶೋಧ ಕಾರ್ಯಾಚರಣೆಯನ್ನು ಸಚಿವರ ಪುತ್ರಿ ಹಾಗೂ ಚಿಕ್ಕೋಡಿ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಅವರಿಗೆ ಸಂಬಂಧಿಸಿದ ಸ್ಥಳಗಳು ಮತ್ತು ಕುಟುಂಬಕ್ಕೆ ಸಂಬಂಧಿಸಿದ ಇತರ ಸ್ಥಳಗಳಲ್ಲೂ ನಡೆಸಲಾಗಿದೆ.

ಜಾರಕಿಹೊಳಿ ಅವರ ಆಪ್ತ ಮೂಲಗಳ ಪ್ರಕಾರ, ಮಹಾರಾಷ್ಟ್ರದಲ್ಲಿರುವ ಕೆಲವು ಸ್ಥಳಗಳಲ್ಲೂ ಶೋಧ ಕಾರ್ಯಾಚರಣೆ ನಡೆಸಲಾಗಿದೆ. ಅಬಕಾರಿ ಇಲಾಖೆಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಇಅ ನಡೆಸುತ್ತಿರುವ ತನಿಖೆಯ ಮುಂದುವರಿದ ಭಾಗವಾಗಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿದುಬಂದಿದೆ. 18 ಬಾರ್ ಲೈಸೆನ್ಸ್‌ಗಳ ವಿತರಣೆಯಲ್ಲಿ ನಡೆದಿರುವ ಎನ್ನಲಾದ ಅಕ್ರಮಗಳು ಮತ್ತು ಅಕ್ರಮ ಹಣದ ವಹಿವಾಟಿನ ಬಗ್ಗೆಯೂ ತನಿಖೆ ನಡೆಯುತ್ತಿದೆ. ಸತೀಶ್ ಜಾರಕಿಹೊಳಿ ಅವರು ತಮ್ಮ ಪ್ರಭಾವವನ್ನು ಬಳಸಿಕೊಂಡು ಈ ಬಾರ್ ಲೈಸೆನ್ಸ್‌ಗಳನ್ನು ಕೊಡಿಸಲು ನೆರವಾಗಿದ್ದಾರೆಯೇ ಹಾಗೂ ಅಕ್ರಮಗಳಿಂದ ಬಂದಿದೆ ಎನ್ನಲಾದ ಹಣವನ್ನು ಬಳಿಕ ವಿದೇಶಕ್ಕೆ ವರ್ಗಾಯಿಸಲಾಗಿದೆಯೇ ಅಥವಾ ವಿದೇಶದಲ್ಲಿ ಹೂಡಿಕೆ ಮಾಡಲಾಗಿದೆಯೇ ಎಂಬುದನ್ನು ತನಿಖಾಧಿಕಾರಿಗಳು ಪರಿಶೀಲಿಸುತ್ತಿದ್ದಾರೆ ಎನ್ನಲಾಗಿದೆ.

## ದಾಳಿಯ ಹಿಂದೆ ಬಿಜೆಪಿಯ ದುರುದ್ದೇಶವಿದೆ :ಸಿಎಂ



ಬೆಂಗಳೂರು: ಸಚಿವ ಸತೀಶ್ ಜಾರಕಿಹೊಳಿ ನಿವಾಸಗಳ ಮೇಲೆ ಜಾರಿ ನಿರ್ದೇಶನಾಲಯದ (ಇಅ) ದಾಳಿಯ ಹಿಂದೆ ಬಿಜೆಪಿಯ ದುರುದ್ದೇಶವಿದ್ದು, ತನಿಖಾ ಸಂಸ್ಥೆಗಳನ್ನು ದುರ್ಬಳಕೆ ಮಾಡಲಾಗುತ್ತಿದೆ ಎಂದು ಸಿಎಂ ಡಿ ಕೆ ಶಿವಕುಮಾರ್ ವಾಗ್ದಾಳಿ ನಡೆಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಬಿಜೆಪಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಕಾಂಗ್ರೆಸ್ ಸರ್ಕಾರ ಹಾಗೂ ಪಕ್ಷವನ್ನು ರಾಜಕೀಯವಾಗಿ ಗುರಿಯಾಗಿಸಲು ಇ.ಡಿ ಅಸ್ತ್ರವನ್ನು ಬಳಸಲಾಗುತ್ತಿದೆ ಎಂದು ಅವರು ಆರೋಪಿಸಿದ್ದಾರೆ. ತಮ್ಮೆಲ್ಲಾ ಸಚಿವರಿಗೆ ಎಚ್ಚರಿಕೆಯ ಮಾತುಹೇಳಿರುವ ಡಿಕೆ ಶಿವಕುಮಾರ್, ಇ.ಡಿ ಯಾರನ್ನೂ ಬಿಡುವುದಿಲ್ಲ, ಸುಳ್ಳು ಕಥೆ ಕಟ್ಟಿ, ಸುಳ್ಳು ಆರೋಪಗಳನ್ನು ಮಾಡಿ ಜನರನ್ನು ತಪ್ಪು ದಾರಿಗೆ ಎಳೆಯಲಾಗುತ್ತಿದೆ ಎಂದು ತಿಳಿಸಿದ್ದಾರೆ.

## ಇಡಿ ಹೇಳುವುದೇನು?



ಸಚಿವ ಸತೀಶ್ ಜಾರಕಿಹೊಳಿ ನಿವಾಸದ ಮೇಲೆ ನಡೆದ ದಾಳಿಗೂ ಕೆಲ ವಾರಗಳ ಹಿಂದೆ ಮಂಜುನಾಥ್ ಅವರ ನಿವಾಸದ ಮೇಲೆ ನಡೆದ ದಾಳಿಗೂ ಸಂಬಂಧವಿಲ್ಲ, ಇಂದಿನ ದಾಳಿಗೆ ಸಚಿವ ಸತೀಶ್ ಜಾರಕಿಹೊಳಿಯವರ ಅಕ್ರಮ ಹಣ ವರ್ಗಾವಣೆ ಕೇಸು ಕಾರಣ ಎಂದು ಇಡಿ ಸ್ಪಷ್ಟಪಡಿಸಿದೆ. ಈ ದಾಳಿಗೂ ಅವರ ಬಾಮೈದ ಮಂಜುನಾಥ್ ವಿರುದ್ಧದ ಅಬಕಾರಿ ಅಕ್ರಮ ಆರೋಪಕ್ಕೂ ಸಂಬಂಧ ಇಲ್ಲ. ವಿದೇಶಗಳಲ್ಲಿ ಮಾಡಿದ ಹೂಡಿಕೆಯ ಕುರಿತಾದ ಆರೋಪಗಳಿಗೆ ಸಂಬಂಧಿಸಿ ಈ ದಾಳಿ ನಡೆದಿದೆ ಎಂದು ಇಡಿ ತಿಳಿಸಿದೆ.

ಎಲೆಕ್ಟ್ರಾನಿಕ್ ಮಾಹಿತಿಯನ್ನು ಪರಿಶೀಲಿಸುತ್ತಿದ್ದಾರೆ ಎಂದು ತಿಳಿದುಬಂದಿದೆ.

ಹಲವು ಸ್ಥಳಗಳಲ್ಲಿ ಶೋಧ ಕಾರ್ಯಾಚರಣೆ ಮುಂದುವರಿದಿದೆ. ಸಚಿವರ ಆಪ್ತ ಸಹಚರರಾದ ಗೋಕಾಕ್‌ನ ರಾಜು ದರಗಶೆಟ್ಟಿ, ಬೆಳಗಾವಿಯ ಡಾ. ಗಿರೀಶ್ ಸೋನವಾಲ್ಕರ್ ಮತ್ತು ವಿಠ್ಠಲ ಪರಸನ್ನನವರ್ ಅವರ ಮನೆಗಳ ಮೇಲೂ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

# ಯಾವ ಮಾನದಂಡದ ಮೇಲೆ ಬರಪೀಡಿತ ಪಟ್ಟಿಯಿಂದ ಹೊರಗಿಟ್ಟಿದ್ದೀರಿ?

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯ ಉಳಿದ ತಾಲೂಕುಗಳನ್ನು ಯಾವ ಮಾನದಂಡದ ಮೇಲೆ ಬರಪೀಡಿತ ಪಟ್ಟಿಯಿಂದ ಹೊರಗಿಟ್ಟಿದ್ದೀರಿ? ಸರ್ಕಾರ ಜಿಲ್ಲೆಯ ಜನತೆಗೆ ಸ್ಪಷ್ಟ ಉತ್ತರ ನೀಡಬೇಕು ಎಂದು ಯುವ ಮುಖಂಡ ಸಂತೋಷ ಬಗಲಿ ಆಗ್ರಹಿಸಿದ್ದಾರೆ.

ನಗರದಲ್ಲಿ ಕಳೆದ ಕೆಲ ದಿನಗಳಿಂದ ನಡೆಯುತ್ತಿರುವ ಅನಿರ್ದಿಷ್ಟ ಹೋರಾಟಕ್ಕೆ ಬೆಂಬಲ ಸೂಚಿಸಿ ಮಾತನಾಡಿದ ಅವರು, ವಿಜಯಪುರ ಜಿಲ್ಲೆಯಲ್ಲಿ ಮಳೆಯ ಕೊರತೆ ಕೇವಲ ಮೂರು ತಾಲೂಕುಗಳಿಗೆ ಮಾತ್ರ ಸೀಮಿತವಾಗಿದೆಯೇ? ಉಳಿದ ತಾಲೂಕುಗಳಲ್ಲಿ ರೈತರ ಬೆಳೆಗಳು ಸಮೃದ್ಧವಾಗಿವೆಯೇ? ಅಲ್ಲಿನ ರೈತರಿಗೆ ನೀರಿನ ಸಮಸ್ಯೆ ಇಲ್ಲವೇ? ಜಾನುವಾರುಗಳಿಗೆ ಮೇವಿನ ಕೊರತೆ ಇಲ್ಲವೇ? ರೈತರು ಸಂಕಷ್ಟದಲ್ಲಿಲ್ಲವೇ? ಎಂಬ ಪ್ರಶ್ನೆಗಳಿಗೆ ಸರ್ಕಾರ ಉತ್ತರ ನೀಡಬೇಕು ಎಂದು ಅವರು ನೇರವಾಗಿ ಪ್ರಶ್ನಿಸಿದ್ದಾರೆ.

ಕಚೇರಿಗಳಲ್ಲಿ ಕುಳಿತು ತಯಾರಿಸಿದ ವರದಿಗಳ ಆಧಾರದ ಮೇಲೆ ರೈತರ ಭವಿಷ್ಯ ನಿರ್ಧರಿಸುವುದನ್ನು ಸರ್ಕಾರ ನಿಲ್ಲಿಸಬೇಕು. ನೆಲದ ವಾಸ್ತವ ಪರಿಸ್ಥಿತಿ ಅರಿಯಲು ಸರ್ಕಾರದ ಸಚಿವರು ಮತ್ತು ಅಧಿಕಾರಿಗಳು ಸ್ವತಃ ವಿಜಯಪುರ ಜಿಲ್ಲೆಯ ಪ್ರತಿಯೊಂದು ತಾಲೂಕಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

■ ಸರ್ಕಾರ ಜನತೆಗೆ ಸ್ಪಷ್ಟ ಉತ್ತರ ನೀಡಲು ಯುವ ಮುಖಂಡ ಸಂತೋಷ ಬಗಲಿ ಆಗ್ರಹ

ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಆಗ್ರಹ

# ಬರ ಘೋಷಣೆ ನಿಯಮಗಳನ್ನು ಮರುಪರಿಶೀಲಿಸಿ ನ್ಯಾಯಯುತ ಪರಿಹಾರ ಒದಗಿಸಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕೇಂದ್ರ ಸರಕಾರ ರಾಜ್ಯದ ರೈತರ ಹಿತದೃಷ್ಟಿಯಿಂದ ಬರ ಘೋಷಣೆಯ ನಿಯಮಗಳನ್ನು ಮರುಪರಿಶೀಲಿಸಿ, ರಾಜ್ಯಕ್ಕೆ ನ್ಯಾಯಯುತ ಪರಿಹಾರ ಒದಗಿಸಬೇಕು ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಆಗ್ರಹಿಸಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಅವರು, ರಾಜ್ಯವು ಹಿಂದೆಂದೂ ಕಂಡು-ಕೇಳರಿಯದ ರೀತಿಯಲ್ಲಿ ಭೀಕರ ಬರಗಾಲದ ಹೊಡೆತಕ್ಕೆ ಸಿಲುಕಿದೆ. ಕಂದಾಯ ಇಲಾಖೆಯ ಹೊಣೆಗಾರಿಕೆಯ ಜೊತೆಗೆ ಉಪಮುಖ್ಯಮಂತ್ರಿಯೂ ಆಗಿರುವ ಡಾ. ಜಿ. ಪರಮೇಶ್ವರ ಅವರು ಈಗಾಗಲೇ 101 ತಾಲೂಕುಗಳನ್ನು ಬರಪೀಡಿತವೆಂದು ಘೋಷಿಸಿದ್ದಾರೆ. ರಾಜ್ಯದ ಒಟ್ಟು 200 ತಾಲೂಕುಗಳನ್ನು ಬರಪೀಡಿತವೆಂದು ಘೋಷಿಸಲು ನಿರ್ಧರಿಸಲಾಗಿದ್ದು, ಹಂತ ಹಂತವಾಗಿ ಈ ಘೋಷಣೆ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿಗಳು ತಿಳಿಸಿದ್ದಾರೆ.

ವಿಜಯಪುರ ಜಿಲ್ಲೆಯಲ್ಲಿ ಈಗಾಗಲೇ ಬರಪೀಡಿತವೆಂದು ಘೋಷಿಸಲಾಗಿರುವ ತಾಲ್ಲೂಕುಗಳನ್ನು ಹೊರತುಪಡಿಸಿ, ಉಳಿದ 10 ತಾಲೂಕುಗಳನ್ನೂ ಬರಪೀಡಿತವೆಂದು ಘೋಷಿಸಬೇಕಾಗಿದೆ. ರೈತರು ಆತಂಕ ಪಡುವ ಅಗತ್ಯವಿಲ್ಲ; ರಾಜ್ಯ ಸರ್ಕಾರ ಅವರ ನೆರವಿಗೆ ಎಲ್ಲ ರೀತಿಯಲ್ಲೂ ಬದ್ಧವಾಗಿದೆ.

ಇಂಥ ಸಂಕಷ್ಟದ ಸಂದರ್ಭದಲ್ಲಿ ರೈತರ ನೆರವಿಗೆ ನಿಲ್ಲಬೇಕಾದ ಕೇಂದ್ರ ಸರಕಾರದ ಬರ ಘೋಷಣೆಯ ಕಠಿಣ ಮಾನದಂಡಗಳಿಂದಾಗಿ ರಾಜ್ಯದ ಅರ್ಹ ರೈತರಿಗೆ ಪರಿಹಾರ ವಿಳಂಬವಾಗುವ ಪರಿಸ್ಥಿತಿ ನಿರ್ಮಾಣವಾಗಿದೆ.

2020ರಲ್ಲಿ ಜಾರಿಗೊಳಿಸಲಾದ ಬರ ಮಾರ್ಗಸೂಚಿಗಳನ್ವಯ ಮಳೆ ಕೊರತೆಯ ಜೊತೆಗೆ ಉಪಗ್ರಹ ಆಧಾರಿತ ಗಿಜರಜಣಚಿಣುಂಟ ಖಟಿಜುಛಿಢ, ಮಣ್ಣಿನ ತೇವಾಂಶದ ಕೊರತೆ, ಬೆಳೆ ಹಾನಿಯ ಪ್ರಮಾಣ ಸೇರಿದಂತೆ ಹಲವು ತಾಂತ್ರಿಕ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪರಿಗಣಿಸಲಾಗುತ್ತಿದೆ. ಇದರಿಂದ ವಾಸ್ತವವಾಗಿ ಬರ ಎದುರಿಸುತ್ತಿರುವ ಹಲವು ಪ್ರದೇಶಗಳನ್ನು ಬರಪೀಡಿತವೆಂದು ಘೋಷಿಸಿ, ಸಕಾಲದಲ್ಲಿ ಪರಿಹಾರ ಒದಗಿಸಲು ರಾಜ್ಯಗಳಿಗೆ ತೊಂದರೆಯಾಗುತ್ತಿದೆ.

ನಿಯಮಗಳು ರೈತರ ಬದುಕನ್ನು ರಕ್ಷಿಸಲು ಇರಬೇಕು. ಅವರ ನೆರವಿಗೆ ಅಡ್ಡಿಯಾಗಬಾರದು. ಒಕ್ಕೂಟ ವ್ಯವಸ್ಥೆಯಲ್ಲಿ ರಾಜ್ಯಗಳ ವಾಸ್ತವ ಪರಿಸ್ಥಿತಿಯನ್ನು ಪರಿಗಣಿಸಿ, ಬರ ಘೋಷಣೆಯ ಕಠಿಣ ಮಾನದಂಡಗಳನ್ನು ಸಡಿಲಿಸುವುದು ಇಂದಿನ ಅಗತ್ಯ. ಅರ್ಹ ರೈತರಿಗೆ ಕೇಂದ್ರದ ಪರಿಹಾರ ಸಕಾಲದಲ್ಲಿ ತಲುಪುವಂತೆ ನಿಯಮಗಳನ್ನು ಪರಿಷ್ಕರಿಸಬೇಕು.

ರೈತನ ಸಂಕಷ್ಟಕ್ಕೆ ಸ್ಪಂದಿಸುವುದು ಸರ್ಕಾರಗಳ ಕರ್ತವ್ಯ ಮಾತ್ರವಲ್ಲ, ಮಾನವೀಯ ಹೊಣೆಗಾರಿಕೆಯೂ ಹೌದು. ಕರ್ನಾಟಕದ ರೈತರ ಹಿತದೃಷ್ಟಿಯಿಂದ ಬರ ಘೋಷಣೆಯ ನಿಯಮಗಳನ್ನು ಮರುಪರಿಶೀಲಿಸಿ, ರಾಜ್ಯಕ್ಕೆ ನ್ಯಾಯಯುತ ಪರಿಹಾರ ಒದಗಿಸುವಂತೆ ಕೇಂದ್ರ ಸರಕಾರವನ್ನು ಒತ್ತಾಯಿಸುತ್ತೇನೆ ಎಂದು ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

# ಕೆಯುಡಬ್ಲ್ಯುಜೆ ರಾಜ್ಯಾಧ್ಯಕ್ಷರ ವಿರುದ್ಧದ ಆರೋಪ ಸತ್ಯಕ್ಕೆ ದೂರ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಚುನಾಯಿತ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಅವರ ವಿರುದ್ಧ ಯಾವುದೇ ಸೂಕ್ತ ದಾಖಲೆ ಹಾಗೂ ಸಾಕ್ಷ್ಯಾಧಾರಗಳಿಲ್ಲದೆ ಆರೋಪಗಳನ್ನು ಮಾಡುವುದು ಖಂಡನೀಯ. ಇಂತಹ ಆರೋಪಗಳು ವ್ಯಕ್ತಿಯ ಘನತೆಗೆ ಮಾತ್ರವಲ್ಲದೆ, ರಾಜ್ಯದ ಪ್ರತಿಷ್ಠಿತ ಪತ್ರಕರ್ತರ ಸಂಘಟನೆಯ ಗೌರವಕ್ಕೂ ಧಕ್ಕೆ ಉಂಟುಮಾಡುತ್ತವೆ ಎಂದು ಚಡಚಣ ತಾಲೂಕು ಕೆಯುಡಬ್ಲ್ಯುಜೆ ಸಂಘದ ಪ್ರಧಾನ ಕಾರ್ಯದರ್ಶಿ ರಾಜಶೇಖರ ಡೋಣಜಮತ ಹೇಳಿದರು.

ಚಡಚಣ ತಹಶೀಲ್ದಾರ್ ಮೂಲಕ ವಿಜಯಪುರ ಜಿಲ್ಲಾಧಿಕಾರಿ,ಸಿ.ಎಂ.ಡಿ ಕೆ ಶಿವಕುಮಾರ ಹಾಗೂ ಗೃಹ ಸಚಿವರಿಗೆ ಕರ್ನಾಟಕ ಕಾನಿಪ ಸಂಘ (ಚಡಚಣ) ವತಿಯಿಂದ ಬುಧವಾರ ಮನವಿ ಸಲ್ಲಿಸಲಾಯಿತು. ತಹಶೀಲ್ದಾರರ ಪರವಾಗಿ ರವಿಕುಮಾರ ಎಸ್.ಚವ್ಹಾಣ ಅವರು ಮನವಿ ಸ್ವೀಕರಿಸಿದರು. ವೈಯಕ್ತಿಕ ದ್ವೇಷ ಅಥವಾ ದುರುದ್ದೇಶದಿಂದ ಸುಳ್ಳು ಹಾಗೂ ಆಧಾರರಹಿತ ಆರೋಪಗಳನ್ನು ಮಾಡುವ ಮೂಲಕ ಪತ್ರಕರ್ತರ ಸಂಘದ ಪ್ರತಿಷ್ಠೆಗೆ ಧಕ್ಕೆ ತರುವ ಪ್ರಯತ್ನಗಳಿಗೆ ನಾವು ಅವಕಾಶ ನೀಡುವದಿಲ್ಲ. ಬಂಗ್ಲೆ ಮಲ್ಲಿಕಾರ್ಜುನ ಅವರು ನೀಡಿರುವ ದೂರಿನಲ್ಲಿನ ಆರೋಪಗಳ ಸತ್ಯಕ್ಕೆ ದೂರ,ಆಧಾರರಹಿತ ಹಾಗೂ ದುರುದ್ದೇಶ ಪೂರ್ವಕವಾಗಿದ್ದು, ದೂರಿನಲ್ಲಿನ ಆರೋಪಗಳ ಸತ್ಯಾಸತ್ಯತೆಯನ್ನು ನಿಷ್ಪಕ್ಷಪಾತವಾಗಿ ತನಿಖೆ ನಡೆಸಿ, ಆರೋಪಗಳು ಆಧಾರರಹಿತವೆಂದು ಸಾಬೀತಾದಲ್ಲಿ ಅವರ ವಿರುದ್ಧ ಅನ್ವಯಿಸುವ ಕಾನೂನುಗಳ ಅಡಿಯಲ್ಲಿ ಕ್ರಿಮಿನಲ್ ಪ್ರಕರಣ ದಾಖಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸಂಘಟನೆಯ ಎಲ್ಲ ಸದಸ್ಯರು ಆಗ್ರಹಿಸಿದರು.

■ ಬಂಗ್ಲೆ ಮಲ್ಲಿಕಾರ್ಜುನ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಲು ಚಡಚಣ ತಾಲೂಕು ಪತ್ರಕರ್ತರ ಸಂಘದಿಂದ ಮನವಿ

ಈ ಸಂದರ್ಭದಲ್ಲಿ ಚಡಚಣ ಕಾನಿಪ ಸಂಘದ ಅಧ್ಯಕ್ಷ ರಮೇಶ ಬಿರಾದಾರ, ಪ್ರ.ಕಾರ್ಯದರ್ಶಿ ರಾಜಶೇಖರ ಡೋಣಜಮತ, ಖಜಾಂಚಿ ವಿನಯ ಜೀರಂಕಲಗಿ, ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಶಿವಾನಂದ ಶಿವಶರಣ, ಕಾರ್ಯದರ್ಶಿ ಪ್ರಶಾಂತ ಮುಂಡೆವಾಡಿ, ಸುಬ್ರಹ್ಮಣ್ಯ ಸಂಗಮ, ಶ್ರೀಕಾಂತ ಬಗಲಿ, ಫಾರುಕ ವಾಲಿಕಾರ, ಸಿದ್ದಯ್ಯ ಹಿರೇಮಠ, ರೋಹಿತ ಹಾವಿನಾಳ ಹಾಗೂ ಪತ್ರಕರ್ತರು ಇದ್ದರು.

# ಬಂಗ್ಲೆ ಮಲ್ಲಿಕಾರ್ಜುನ ವಿರುದ್ಧ ಕ್ರಮಕ್ಕೆ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ನಿಡಗುಂದಿ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ವಿರುದ್ಧ ಬಂಗ್ಲೆ ಮಲ್ಲಿಕಾರ್ಜುನ ನೇತೃತ್ವದ ಸಂಘಟನೆಯಿಂದ ನೀಡಿರುವ ದೂರನ್ನು ಪರಿಗಣಿಸಬಾರದು ಹಾಗೂ ಉದ್ದೇಶಪೂರ್ವಕವಾಗಿ ತೇಜೋವಧೆ ಮಾಡಲಾಗುತ್ತಿದೆ ಎಂದು ಆರೋಪಿಸಿ, ಬಂಗ್ಲೆ ಮಲ್ಲಿಕಾರ್ಜುನ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ನಿಡಗುಂದಿ ಘಟಕದ ಪದಾಧಿಕಾರಿಗಳು ತಹಶೀಲ್ದಾರರಿಗೆ ಮನವಿ ಸಲ್ಲಿಸಿದ್ದಾರೆ.

ಸಂಘವು ಹಲವು ವರ್ಷಗಳಿಂದ ರಾಜ್ಯದಾದ್ಯಂತ ಕಾರ್ಯನಿರ್ವಹಿಸುತ್ತಿದ್ದು, ಚುನಾಯಿತ ಸಮಿತಿಯ ನೇತೃತ್ವದಲ್ಲಿ ಸಂಘಟನಾತ್ಮಕ ಚಟುವಟಿಕೆಗಳನ್ನು ನಡೆಸುತ್ತಿದೆ. ಲೆಕ್ಕಪತ್ರ ಮತ್ತು ವಹಿವಾಟುಗಳು ಪಾರದರ್ಶಕವಾಗಿದ್ದು, ನಿಯಮಿತವಾಗಿ ರಾಜ್ಯ ಸಮಿತಿ ಹಾಗೂ ವಾರ್ಷಿಕ ಸಾಮಾನ್ಯ ಸಭೆಗಳು ನಡೆಯುತ್ತಿವೆ ಎಂದು ಮನವಿಯಲ್ಲಿ ತಿಳಿಸಲಾಗಿದೆ. ಸಂಘದ ಚುನಾಯಿತ ಅಧ್ಯಕ್ಷರ ವಿರುದ್ಧ ಆಧಾರರಹಿತ ಆರೋಪಗಳನ್ನು ಮಾಡುವ ಮೂಲಕ ಸಂಘದ ಗೌರವಕ್ಕೆ ಧಕ್ಕೆ ತರುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿರುವ ಪದಾಧಿಕಾರಿಗಳು, ಈ ಕುರಿತು ಸೂಕ್ತ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ಸಂಘದ ತಾಲೂಕು ಘಟಕದ ಅಧ್ಯಕ್ಷ ಬಸವರಾಜ ಹೇರಕಲ್, ಪ್ರಧಾನ ಕಾರ್ಯದರ್ಶಿ ಮಹಮ್ಮದಅಲಿ ಮಕಾನದಾರ, ಉಪಾಧ್ಯಕ್ಷರಾದ ಮಹಬೂಬ್ ವಾಲಿಕಾರ್, ಶೇಖರ್ ಬಳ್ಳಾರಿ, ಖಾದರ್ ಪಟೇಲ್ ಬಿರಾದಾರ್, ಬೀರಪ್ಪ ಬೆನ್ನೂರ್, ಜಿ ಸಿ ಮುತ್ತಲದಿನ್ನಿ , ಮಲ್ಲಿಕಾರ್ಜುನಯ್ಯ ತೊರ್ಗಲಮಠ, ಬಸಲಿಂಗಯ್ಯ ಮಠಪತಿ, ಸೇರಿದಂತೆ ಅನೇಕರಿದ್ದರು.

■ ಶಿವಾನಂದ ತಗಡೂರ ವಿರುದ್ಧದ ದೂರು ಖಂಡಿಸಿ ಸಂಘದ ನಿಡಗುಂದಿ ಘಟಕದಿಂದ ಮನವಿ

# ವಿವಿಧ ಯೋಜನೆಗಳ ಕಾಮಗಾರಿ 3 ತಿಂಗಳಲ್ಲಿ ಪೂರ್ಣಗೊಳಿಸಿ

## ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮಕ್ಕೆ ಜಿ.ಪಂ. ಸಿಇಒ ರಿಷಿ ಆನಂದ್ ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮುಂಬರುವ ದಿನಗಳಲ್ಲಿ ಗ್ರಾಮೀಣ ಪ್ರದೇಶದ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಜಲಜೀವನ್ ಮಿಷನ್ ಸೇರಿದಂತೆ ವಿವಿಧ ಯೋಜನೆಗಳ ಕಾಮಗಾರಿಗಳನ್ನು ಡಿಸೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ್ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

ವಿಜಯಪುರ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮುಂದಿನ 23 ತಿಂಗಳಲ್ಲಿ ಮಳೆ ಕೊರತೆಯಾಗುವ ಸಾಧ್ಯತೆ ಇರುವುದರಿಂದ, ಟಾಸ್ಕ್ ಫೋರ್ಸ್ ಅಡಿಯಲ್ಲಿ ಬಿಡುಗಡೆಯಾದ ಅನುದಾನವನ್ನು ಅಗತ್ಯವಿರುವಲ್ಲಿ ಮಾತ್ರ ಬಳಸಬೇಕು. ಅನಗತ್ಯ ಹೊಸ ಬೋರ್‌ವೆಲ್‌ಗಳನ್ನು ಕೊರೆಯಿಸುವುದನ್ನು ನಿಯಂತ್ರಿಸಿ, ತೀವ್ರ ಅಭಾವವಿರುವ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಪೂರೈಸಲು ಕ್ರಮ ವಹಿಸಬೇಕು. ತಾಲೂಕು ಮಟ್ಟದಲ್ಲಿ ಪರಿಸ್ಥಿತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲು ಇಂಜಿನಿಯರ್‌ಗಳು ಹಾಗೂ ತಾಲೂಕು ಪಂಚಾಯತಿ ಇಒಗಳು ಪ್ರತಿ ವಾರ ಜಂಟಿ ಸಭೆ ನಡೆಸಿ ಸಮಸ್ಯಾತ್ಮಕ ಗ್ರಾಮಗಳ ಪಟ್ಟಿಯನ್ನು ಜಿಲ್ಲಾ ಪಂಚಾಯತಿಗೆ ಸಲ್ಲಿಸಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ 1,000 ಜಲಜೀವನ್ ಮಿಷನ್ ಕಾಮಗಾರಿಗಳ ಪೈಕಿ 841 ಪೂರ್ಣಗೊಂಡಿದ್ದು, ಬಾಕಿ ಉಳಿದ ಕಾಮಗಾರಿಗಳನ್ನು ಡಿಸೆಂಬರ್ 2026ರೊಳಗೆ ಮುಗಿಸಲು ಸೂಚಿಸಲಾಗಿದೆ. ಜಿಲ್ಲೆಯ 654 ಗ್ರಾಮಗಳಲ್ಲಿ ಈಗಾಗಲೇ 367 ಗ್ರಾಮಗಳು 'ಹರ್ ಘರ್ ಜಲ್' ಆಪ್‌ನಲ್ಲಿ ಪ್ರಮಾಣೀಕರಿಸಲ್ಪಟ್ಟಿದ್ದು, ಬಾಕಿ 287 ಗ್ರಾಮಗಳ ಪ್ರಕ್ರಿಯೆಯನ್ನು ವೇಗಗೊಳಿಸಲು ಇಂಜಿನಿಯರ್‌ಗಳಿಗೆ ವಾರಕ್ಕೆ ಕನಿಷ್ಠ ಒಂದು ಗ್ರಾಮದ ಗುರಿ ನಿಗದಿಪಡಿಸಲಾಗಿದೆ.

ಇದಲ್ಲದೆ, ಜಿಲ್ಲೆಯ 4.64 ಲಕ್ಷ ಗ್ರಾಮೀಣ ಮನೆಗಳ ಪೈಕಿ 4.15 ಲಕ್ಷ ಮನೆಗಳಿಗೆ ಕಾರ್ಯಾತ್ಮಕ ನಳ ಸಂಪರ್ಕ ನೀಡಲಾಗಿದ್ದು, ಬಾಕಿ ಮನೆಗಳಿಗೆ ನಿಗದಿತ ಅವಧಿಯಲ್ಲಿ ಸಂಪರ್ಕ ಕಲ್ಪಿಸುವುದರ ಜೊತೆಗೆ ಫಲಾನುಭವಿಗಳ ಆಧಾರ್ ಮಾಹಿತಿಯನ್ನು ಜೆಜೆಎಂ ತಂತ್ರಾಂಶದಲ್ಲಿ ಇಂದೀಕರಿಸಲು ಪಂಚಾಯತಿ ಸಿಬ್ಬಂದಿಗೆ ಸೂಚಿಸಲಾಯಿತು. ಮಳೆ ಅಭಾವದ ಹಿನ್ನೆಲೆಯಲ್ಲಿ 'ಜಲಧಾರೆ'



ಸ್ಕೀಮ್1 ಯೋಜನೆಯ ಕಾಮಗಾರಿಯನ್ನೂ ಸಹ ಡಿಸೆಂಬರ್ 2026ರ ವೇಳೆಗೆ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕೆಂದು ಸಿಇಒ ಅವರು ನಿರ್ದೇಶಿಸಿದರು. ಈ ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಇಂಜಿನಿಯರ್ ವರ್ಧಮಾನ ಗೊಂಗಡಿ, ವಿವಿಧ ಉಪವಿಭಾಗಗಳ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್‌ಗಳು ಹಾಗೂ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಸೋಯಾಬೀನ್ ಬೆಳೆಯಲ್ಲಿ ಕೀಟ ಹಾಗೂ ರೋಗ ನಿರ್ವಹಣೆಗೆ ಸಲಹೆ

■ ಉದಯರಶ್ಮಿ ದಿನಪತ್ರಿಕೆ

ಬೀದರ್: ಬೀದರ್ ಜಿಲ್ಲೆಯ ಸೋಯಾಬೀನ್ ಬೆಳೆಯು ಪ್ರಸ್ತುತ ಕಾಳು ತುಂಬುವ ನಿರ್ಣಾಯಕ ಹಂತದಲ್ಲಿದ್ದು, ಗರ್ಡಲ್ ಬೀಟಲ್ (ಕಾಂಡ ಕಡಿಯುವ ದುಂಬಿ) ಮತ್ತು ಕಾಯಿ ಕೊರಕ ಹುಳುಗಳ ಹಾವಳಿ ತೀವ್ರವಾಗಿ ಕಂಡುಬರುತ್ತಿದೆ ಎಂದು ಬೀದರ್ ಕೃಷಿ ವಿಜ್ಞಾನ ಕೇಂದ್ರ (ಐಸಿಎಆರ್) ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು ತಿಳಿಸಿದ್ದಾರೆ.

ಗರ್ಡಲ್ ಬೀಟಲ್ ಹೆಣ್ಣು ದುಂಬಿಯು ಮುಖ್ಯ ಕಾಂಡ ಅಥವಾ ರೆಂಬೆಗಳ ಮೇಲೆ ಉಂಗುರಾಕಾರದ ಕಚ್ಚುಗಳನ್ನು ಮಾಡಿ ಮೊಟ್ಟೆ ಇಡುವುದರಿಂದ ಪೋಷಕಾಂಶಗಳ ಸಂಚಾರ ಸ್ಥಗಿತಗೊಂಡು ಕಚ್ಚಿನ ಮೇಲ್ಭಾಗದ ಎಲೆ, ಹೂವು ಹಾಗೂ ಕಾಯಿಗಳು ಒಣಗುತ್ತವೆ. ಇದರೊಂದಿಗೆ ಕಾಯಿ ಕೊರಕ ಹಾಗೂ ಎಲೆ ತಿನ್ನುವ ಕಂಬಳಿ ಹುಳುಗಳು ಕಾಯಿಗಳಿಗೆ ರಂಧ್ರ ಕೊರೆದು ಇಳುವರಿಯನ್ನು ಗಣನೀಯವಾಗಿ ನಷ್ಟಪಡಿಸುತ್ತವೆ. ನಿಯಂತ್ರಣಕ್ಕಾಗಿ ರೈತರು ಬಾಧಿತ ಒಣಗಿದ ರೆಂಬೆಗಳನ್ನು ಕತ್ತರಿಸಿ ನಾಶಪಡಿಸಬೇಕು ಮತ್ತು ಪ್ರತಿ ಲೀಟರ್ ನೀರಿಗೆ ಕ್ಲೋರಾಂಟ್ರಾನಿಲಿಪ್ರೋಲ್ 18.5% ಎಸ್.ಸಿ 0.3 ಮಿ.ಲೀ ಅಥವಾ ಥಯಾಮೆಥಾಕ್ಸಮ್ + ಲ್ಯಾಂಬ್ಡಾ ಸೈಹ್ಯಾಲೋಥ್ರಿನ್ 0.4 ಮಿ.ಲೀ ಅಥವಾ 0.5 ಗ್ರಾಂ ಫ್ಲೂಬೆಂಡಿಯಾಮೈಡ್ 20% ಡಬ್ಲ್ಯೂ.ಜಿ ಅಥವಾ 0.2 ಮಿ.ಲೀ ಸ್ಪೈನೋಸ್ಯಾಡ್ 45 ಎಸ್.ಸಿ. ಅಥವಾ 2.0 ಮಿ.ಲೀ ಕ್ವಿನಾಲ್‌ಫಾಸ್ 25 ಇ.ಸಿ. ಬೆರೆಸಿ ಸಿಂಪಡಿಸಬೇಕು. ಜೊತೆಗೆ ಹೊಲದಲ್ಲಿ ಹಳದಿ ನಂಜು ರೋಗ ಕಂಡುಬಂದಲ್ಲಿ ಬಾಧಿತ ಗಿಡಗಳನ್ನು ಕಿತ್ತು ನಾಶಪಡಿಸಿ, ಎಕರೆಗೆ 8–10 ಹಳದಿ ಅಂಟು ಬಲೆಗಳನ್ನು ಅಳವಡಿಸಬೇಕು ಹಾಗೂ ನಿಯಂತ್ರಣಕ್ಕೆ ಇಮಿಡಾಕ್ಲೋಪ್ರಿಡ್ (0.3 ಮಿ.ಲೀ/ಲೀ) ಸಿಂಪಡಿಸಬೇಕು. ಎಲೆ ಚುಕ್ಕೆ ಮತ್ತು ತುಕ್ಕು ರೋಗದ ಬಾಧೆ ಕಂಡುಬಂದಲ್ಲಿ ಶಿಲೀಂಧ್ರನಾಶಕ ಹೆಕ್ಸಾಕೋನಾಜೋಲ್ ಅನ್ನು ಪ್ರತಿ ಲೀಟರ್ ನೀರಿಗೆ 1.0 ಮಿ.ಲೀ ಬೆರೆಸಿ ಸಿಂಪಡಿಸಬೇಕು. ಇದರೊಂದಿಗೆ, ಈ ಹಂತದಲ್ಲಿ ಕಾಳುಗಳು ಚೆನ್ನಾಗಿ ತುಂಬಿ ಉತ್ತಮ ತೂಕ ಹಾಗೂ ಹೊಳಪು ಪಡೆಯಲು ಪೋಷಕಾಂಶಗಳ ನಿರ್ವಹಣೆಗಾಗಿ ಪ್ರತಿ ಲೀಟರ್ ನೀರಿಗೆ 10 ಗ್ರಾಂ 13:00:45 (ಪೊಟ್ಯಾಶಿಯಂ ನೈಟ್ರೇಟ್) ಅಥವಾ 00:52:34 ಮತ್ತು 1 ಗ್ರಾಂ ಬೋರಾನ್ ಬೆರೆಸಿ ಎಲೆಗಳ ಮೇಲೆ ಸಿಂಪಡಿಸಬೇಕು. ಔಷಧಿ ಸಿಂಪರಣೆಯನ್ನು ಮಳೆ ಇಲ್ಲದ ವಾತಾವರಣದಲ್ಲಿ, ಬೆಳಿಗ್ಗೆ ಅಥವಾ ಸಂಜೆಯ ತಂಪಾದ ವೇಳೆಯಲ್ಲಿ ಕೈಗೊಳ್ಳಬೇಕು ಹಾಗೂ ಕೀಟನಾಶಕ ದ್ರಾವಣಕ್ಕೆ ಅಂಟು ದ್ರವವನ್ನು (ಸ್ಪ್ರೆಡರ್/ಸ್ಟಿಕ್ಕರ್) ಬೆರೆಸಿ ಸಿಂಪಡಿಸುವುದರಿಂದ ಅತ್ಯುತ್ತಮ ಕೀಟ ನಿಯಂತ್ರಣ ಫಲಿತಾಂಶವನ್ನು ಪಡೆಯಬಹುದು.

## ವಿಜಯಪುರದ ಎಲ್ಲ ಗಜಾನನ ಮಂಡಳಿಗಳ ಪೂರ್ವಭಾವಿ ಸಭೆಯಲ್ಲಿ ಶಾಸಕ ಬಸನಗೌಡ ಪಾಟೀಲ ಯತ್ನಾಳ ಭರವಸೆ

# ಗಣೇಶ ವಿಸರ್ಜನೆಗೆ ಶಾಶ್ವತ ಬೃಹತ್ ಹೊಂಡ ನಿರ್ಮಾಣ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ತಾಜಬಾವಡಿ ಬಳಿ ಗಣೇಶ ವಿಸರ್ಜನೆಗೆ ಶಾಶ್ವತ ಹೊಂಡ ನಿರ್ಮಾಣದ ಜೊತೆಗೆ ಎರಡು ವರ್ಷದಲ್ಲಿ ಕೇಂದ್ರ ಕಾರಾಗೃಹದ ಹತ್ತಿರ ಸಹ ಸುಮಾರು 4 ಎಕರೆ ಜಮೀನಿನಲ್ಲಿ ಗಣೇಶ ವಿಸರ್ಜನೆಗೆ ಬೃಹತ್ ಹೊಂಡ ನಿರ್ಮಾಣ ಮಾಡಲಾಗುವುದು ಎಂದು ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳರು ತಿಳಿಸಿದರು.

ನಗರದ ಸಿದ್ದೇಶ್ವರ ದೇವಸ್ಥಾನ ಆವರಣದಲ್ಲಿರುವ ಶ್ರೀ ಸಿದ್ದೇಶ್ವರ ಸಂಸ್ಥೆಯ ಶ್ರೀ ಶಿವಾನುಭವ ಮಂಟಪದಲ್ಲಿ ಸೋಮವಾರ ಸ್ವಾಮಿ ವಿವೇಕಾನಂದ ಸೇನೆಯ ಶ್ರೀ ಗಜಾನನ ಮಹಾಮಂಡಳ ವತಿಯಿಂದ ಹಮ್ಮಿಕೊಂಡಿದ್ದ ವಿಜಯಪುರ ನಗರದ ಎಲ್ಲ ಗಜಾನನ ಮಂಡಳಿಗಳ ಪೂರ್ವಭಾವಿ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬದಲಾವಣೆಯನ್ನು ಎಲ್ಲರೂ ಸಹಜವಾಗಿ ಒಪ್ಪಿಕೊಳ್ಳಬೇಕು. ಪರಿಸರ ಸಂರಕ್ಷಣೆ ಎಲ್ಲರ ಜವಾಬ್ದಾರಿ. ಭವಿಷ್ಯದಲ್ಲಿ ವಿಜಯಪುರದ ಅಭಿವೃದ್ಧಿಗೆ ತೊಂದರೆ ಆಗಬಾರದು. ಹೀಗಾಗಿ ತಾಜಬಾವಡಿ ಕೂಡ ರಕ್ಷಣೆ ಆಗಬೇಕು. ಜಿದ್ದಿಗೆ ಬಿದ್ದು ತಪ್ಪು ಹೆಜ್ಜೆ ಇಡಬಾರದು. ಪರಿಸರಕ್ಕೆ ಪೂರಕವಾಗಿಯೇ ನಾವು ಉತ್ಸವ ಮಾಡಬೇಕು. ತಾಜಬಾವಡಿಯಲ್ಲಿ ಹಿಂದಿನಿಂದ ನಡೆದುಕೊಂಡು ಬಂದ ಗಣೇಶ ವಿಸರ್ಜನೆಗಾಗಿ ಅಲ್ಲಿ ಕೂಡ ಶಾಶ್ವತ ಗಣೇಶ ಹೊಂಡ ನಿರ್ಮಿಸಲಾಗುವುದು ಎಂದು ಭರವಸೆ ನೀಡಿದರು.

ಈ ವರ್ಷ ಫೈಬರ್ ಗಣೇಶ ಮೂರ್ತಿ ಮಾಡುವವರಿಗೆ ಸ್ವಂತ ಖರ್ಚಿನಲ್ಲಿ ಮಂಟಪ ನಿರ್ಮಾಣ ಮಾಡಿಕೊಡುತ್ತೇನೆ. ಈಗಾಗಲೇ ಸಾಕಷ್ಟು ಗಣೇಶ ಮಂಡಳಿಗಳಿಗೆ ಆರ್ಥಿಕ ಸಹಾಯ ಮಾಡಲಾಗಿದೆ. ಪ್ರತಿ ವರ್ಷದಂತೆ ಗಣೇಶ ಮಂಡಳಿಗಳಿಗೆ ತಮ್ಮಬಳಿಯೇ ಬಂದು ರೂ.5 ಸಾವಿರ ದೇಣಿಗೆ ನೀಡಲಾಗುವುದು ಎಂದು ಘೋಷಣೆ ಮಾಡಿದರು. ಗಣೇಶ ವಿಸರ್ಜನೆ ಮೆರವಣಿಗೆ ಆದಷ್ಟು ಮಧ್ಯಾಹ್ನ ಬೇಗನೇ ಆರಂಭಿಸಿದರೆ ಎಲ್ಲರಿಗೂ ಮೆರವಣಿಗೆ ವೀಕ್ಷಣೆಗೆ ಅವಕಾಶ ಕಲ್ಪಿಸಿದಂತಾಗುತ್ತದೆ ಎಂದು ಸಲಹೆ ನೀಡಿದರು. ಮೇಯರ್ ಎಂ.ಎಸ್.ಕರಡಿ, ಮಹಾನಗರ ಪಾಲಿಕೆ ಸದಸ್ಯರಾದ ಶಿವರುದ್ರ ಬಾಗಲಕೋಟ, ರಾಹುಲ್ ಜಾಧವ, ಸಿದ್ದೇಶ್ವರ ಬ್ಯಾಂಕ್ ನಿರ್ದೇಶಕ ಗುರುಪಾದಯ್ಯ ಗಚ್ಚಿನಮಠ ಮಾತನಾಡಿದರು.

ಸಿದ್ಧಸಿರಿ ಮಲ್ಟಿ–ಸ್ಟೇಟ್ ಮಲ್ಟಿ–ಪರ್ಪಸ್ ಕೋ–ಆಪರೇಟಿವ್ ಸೊಸೈಟಿ ಅಧ್ಯಕ್ಷ ರಾಮನಗೌಡ ಪಾಟೀಲ ಯತ್ನಾಳ, ಶ್ರೀ ಸಿದ್ದೇಶ್ವರ ಸಂಸ್ಥೆ ಉಪಾಧ್ಯಕ್ಷ ಸಂ.ಗು.ಸಜ್ಜನ, ಚೇರಮನ್ ಬಸಯ್ಯ ಹಿರೇಮಠ, ಸದಸ್ಯ ಸಾಯಿಬಣ್ಣ ಭೋವಿ, ಮಹಾನಗರ ಪಾಲಿಕೆ ಸದಸ್ಯರಾದ ಕಿರಣ ಪಾಟೀಲ, ರಾಜಶೇಖರ ಕುರಿಯವರ, ಮಲ್ಲಿಕಾರ್ಜುನ ಗಡಗಿ, ವಿಠ್ಠಲ ಹೊಸಪೇಟೆ, ಜವಾಹರ ಗೋಸಾವಿ, ಗಿರೀಶ ಪಾಟೀಲ, ಮುಖಂಡರಾದ ಎಂ.ಎಸ್.ರುದ್ರಗೌಡ್ರ, ರಾಜೇಶ ದೇವಗಿರಿ, ರಾಜು ಜಾಧವ, ಪಾಂಡುಸಾಹುಕಾರ ದೊಡಮನಿ, ಸುನೀಲ ಬೈರವಾಡಗಿ, ಬಾಬು ಶಿರಶ್ಯಾಡ, ವಿಕ್ರಮ ಗಾಯಕವಾಡ ಸೇರಿದಂತೆ ಹಲವರಿದ್ದರು.



" ಗಣೇಶ ಭಕ್ತರ ಇಚ್ಛೆಯಂತೆ ತಾಜಬಾವಡಿಯಲ್ಲಿ ಅನೇಕ ವರ್ಷಗಳಿಂದ ನಡೆದುಕೊಂಡು ಬಂದ ಗಣೇಶ ವಿಸರ್ಜನೆಯನ್ನು ಅಲ್ಲಿಯೇ ಶಾಶ್ವತವಾಗಿ ನಡೆಸಲು ದೊಡ್ಡ ಹೊಂಡ ನಿರ್ಮಾಣಕ್ಕಾಗಿ ಪುರಾತತ್ವ ಇಲಾಖೆಯಿಂದ ಅನುಮತಿ ಪಡೆದುಕೊಳ್ಳಲು ಪತ್ರ ಬರೆಯಲಾಗಿದೆ. ಗಣೇಶ ಉತ್ಸವ ಯಶಸ್ವಿಗೆ ಪಾಲಿಕೆ ಯಿಂದ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು."

■ ವಿಜಯಕುಮಾರ್ ಮೆಕ್ಕಳಕಿ
ಮಹಾನಗರ ಪಾಲಿಕೆ ಆಯುಕ್ತರು



### ಪದಾಧಿಕಾರಿಗಳ ನೇಮಕ

2026ನೇ ಸಾಲಿನ ಸ್ವಾಮಿ ವಿವೇಕಾನಂದ ಸೇನೆಯ ಶ್ರೀ ಗಜಾನನ ಮಹಾಮಂಡಳದ ಅಧ್ಯಕ್ಷರನ್ನಾಗಿ ಆಕಾಶ ಬಿರಾದಾರ, ಉಪಾಧ್ಯಕ್ಷರನ್ನಾಗಿ ಭೀಮು ಮಾಶ್ಯಾಳ, ಪ್ರವೀಣ ಕೂಡಗಿ, ಸಂದೀಪ ಕಾಳೆ, ಓಗೇಶಕುಮಾರ ನಡುವಿನಕೇರಿ, ರಾಹುಲ್ ಫನಾಳ್ಕರ್, ಪ್ರಧಾನ ಕಾರ್ಯದರ್ಶಿಗಳನ್ನಾಗಿ ಸಿದ್ದನಗೌಡ ಬಿರಾದಾರ, ಈಶ್ವರ ನಾಯ್ಕ, ಕಾರ್ಯದರ್ಶಿಗಳನ್ನಾಗಿ ಶರಣು ನಾವಿ, ರವಿ ಕುಂಚಿಕೊರವರ, ಅಜಯ ಮುಳವಾಡ, ಜಿತೇಂದ್ರ ದೇಶಪಾಂಡೆ, ಗುರು ಪೂಜಾರಿ ಅವರನ್ನು ನೇಮಕ ಮಾಡಲಾಯಿತು.

"ದುರ್ಘಟನೆಗಳು ನಡೆಯುವುದನ್ನು ತಪ್ಪಿಸಲು ಮೆರವಣಿಗೆ ವೇಳೆ ಗಾಡಿಯಲ್ಲಿ 12 ಅಡಿ ಒಳಗೆ ಎತ್ತರ ಕಾಯ್ದುಕೊಳ್ಳಬೇಕು. ಸಮಸ್ಯೆ ತಪ್ಪಿಸಲು ಗಾಡಿ ಹಿಂದೆಯೇ ಡಿಜೆ ಕಟ್ಟಬೇಕು."

■ ಡಿಎಸ್ಪಿ ಜಿ.ನಾಗರಾಜ - ಸಿಪಿಐ ಪ್ರದೀಪ ತಳಕೇರಿ




ವಿಜಯಪುರದ ಸೇನಾ ನಗರದ ಶಿವಾಲಯ ದೇವಸ್ಥಾನದಲ್ಲಿ ಜರುಗಿದ 'ಬುತ್ತಿ ಜಾತ್ರೆ'

# ಸಾರ್ಥಕ ಬದುಕಿನ ಸತ್ಯ ಅರಿಯಲು ಅಧ್ಯಾತ್ಮ :ಅಭಿನವ ಸಿದ್ಧಾರೂಢ ಶ್ರೀ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಹಿಂದೂ ಸಂಸ್ಕೃತಿಯಲ್ಲಿ ಶ್ರಾವಣ ಮಾಸವು ಒಂದು ವಿಶಿಷ್ಟವಾದ ಆಚರಣೆಯಾಗಿದೆ. ಈ ಮಾಸದಲ್ಲಿ ನಾವು ಪ್ರತಿದಿನವು ಶಿವ ಧ್ಯಾನ, ತಪಸ್ಸು, ಪ್ರಾರ್ಥನೆ, ದೇವರ ನಾಮಸ್ಮರಣೆ, ಪುರಾಣ, ಪ್ರವಚನ, ಕೀರ್ತನೆ ಮತ್ತು ಜೀವನ ಸಂದೇಶ ನೀಡುವ ಅಧ್ಯಾತ್ಮಿಕತೆಯ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ದೇವರನ್ನು ಭಕ್ತಿ–ಭಾವದಿಂದ ಪೂಜಿಸಿದರೆ ನಮ್ಮೆಲ್ಲ ಸಂಕಷ್ಟಗಳು ದೂರಾಗಲಿವೆ. ಜೀವನದಲ್ಲಿ ಸುಖ–ಶಾಂತಿ, ನೆಮ್ಮದಿ ಮತ್ತು ಸಾರ್ಥಕ ಬದುಕಿನ ಸತ್ಯವನ್ನು ಅರಿಯಲು ಮತ್ತು ಮನದಲ್ಲಿರುವ ಕಲ್ಮಶಗಳನ್ನು ಹೋಗಲಾಡಿಸಲು ಶ್ರಾವಣ ಮಾಸವು ಪ್ರಯೋಜನಕಾರಿ ಎಂದು ವಿಜಯಪುರದ ಷಣ್ಮುಖಾರೂಢ ಮಠದ ಅಭಿನವ ಸಿದ್ಧಾರೂಢ ಮಹಾಸ್ವಾಮಿಗಳು ತಮ್ಮ ಆಶೀರ್ವಚನದಲ್ಲಿ ಹೇಳಿದರು.

ಅವರು ನಗರದ ನವರಸಪುರದ ಸೇನಾ ನಗರದ ಶಿವಾಲಯ ದೇವಸ್ಥಾನದಲ್ಲಿ ಶ್ರಾವಣ ಮಾಸದ ಪುರಾಣ ಮಂಗಲ ಪ್ರಯುಕ್ತ ಜರುಗಿದ "ಬುತ್ತಿ ಜಾತ್ರೆ" ಯನ್ನು ಉದ್ಘಾಟಿಸಿ ಆಶೀರ್ವಚನ ನೀಡಿ ಮಾತನಾಡುತ್ತಿದ್ದರು.

ಯುವ ಜನಾಂಗ ಕ್ಕೆ ನಮ್ಮ ಧರ್ಮ, ಸಂಸ್ಕೃತಿ–ಸಂಸ್ಕಾರ, ಸಾಂಪ್ರದಾಯಿಕ ಪದ್ಧತಿ, ಆಚರಣೆಗಳ ಬಗ್ಗೆ ಅರಿವು ಮೂಡಿಸುವದು ಮತ್ತು ಸಮಾಜದಲ್ಲಿ ಭಾವೈಕ್ಯತೆ ಮತ್ತು ಸಾಮರಸ್ಯತೆಯನ್ನು ಮೂಡಿಸಲು ಈ ಬುತ್ತಿ ಜಾತ್ರೆಯಂತಹ ಉತ್ಸವಗಳು ಸಹಕಾರಿ ಎಂದರು.

ಸಾಂಸ್ಕೃತಿಕ ವೈಶಿಷ್ಟತೆ ಹೊಂದಿದ ಈ ಬುತ್ತಿ ಜಾತ್ರೆಯಲ್ಲಿ ನವರಸಪುರ ವಿವಿಧ ಬಡಾವಣೆಗಳಿಂದ ಮುತ್ತೈದೆಯರು ಸ್ವಯಂ ಸ್ಫೂರ್ತಿಯಿಂದ ಸಜ್ಜೆ ರೊಟ್ಟಿ, ಜೋಳದ ರೊಟ್ಟಿ, ಚಪಾತಿ, ಹೋಳಿಗೆ, ಪಲ್ಲೆ, ಹುಳಬಾನ, ಹಿಂಡಿ ಮತ್ತು ಇನ್ನಿತರ ಆಹಾರ ಪದಾರ್ಥಗಳನ್ನು ತಯಾರಿಸಿ, ಬಿಳಿ ಬಟ್ಟೆಯಲ್ಲಿ ಬುತ್ತಿ ಕಟ್ಟಿಕೊಂಡು ಲಕ್ಷ್ಮಿ ದೇವಸ್ಥಾನಕ್ಕೆ ಆಗಮಿಸಿದರು.

ನಂತರ ಬುತ್ತಿಗೆ ಪೂಜೆ ಸಲ್ಲಿಸಿ, ಅಲ್ಲಿಂದ ಸಂಜೆ ವಿಜಯಪುರದ ಷಣ್ಮುಖಾರೂಢ ಮಠದ ಅಭಿನವ ಸಿದ್ಧಾರೂಢ ಮಹಾಸ್ವಾಮಿಗಳು ಹಾಗೂ ಮಲ್ಲಿಕಾರ್ಜುನ ಹಿರೇಮಠ ಶಾಸ್ತ್ರಿಗಳೊಂದಿಗೆ ಲಕ್ಷ್ಮಿ ದೇವಸ್ಥಾನದಿಂದ ಶಿವಾಲಯಕ್ಕೆ ಭವ್ಯ ಮೆರವಣಿಗೆಯಲ್ಲಿ ಆಗಮಿಸಿತು.

ಈ ಬುತ್ತಿ ಜಾತ್ರೆಯಲ್ಲಿ ದೇವಾಲಯದ ಅಧ್ಯಕ್ಷ ಗುರುಬಸಯ್ಯ ಹಿರೇಮಠ, ಉಪಾಧ್ಯಕ್ಷ ಶ್ರೀ ಭರಮಣ್ಣ ಕಡಕೋಳ, ಡಾ. ರಾಜಕುಮಾರ ಜೊಲ್ಲೆ, ಪ್ರೊ. ಬಿ.ವ್ಹಿ.ಕುಂಬಾರ, ರಾಜಶೇಖರ ಉಮರಾಣಿ, ಪ್ರೊ. ಎಂ.ಎಸ್.ಖೊದ್ನಾಪೂರ, ಅಲ್ಲಮಪ್ರಭು ಶಿರಹಟ್ಟಿ, ಬಸಯ್ಯ ಮಠಪತಿ, ಆರ್.ಎಸ್.ಕಪಾಳಿ, ಲಕ್ಷ್ಮಿ ದೇವಸ್ಥಾನದ ಅಧ್ಯಕ್ಷೆ ಶೋಭಾ ಚವ್ಹಾಣ, ಶಾಂತಾ ಕಪಾಳಿ, ಶ್ರೀಶೈಲ ಅವಜಿ, ಅರವಿಂದ ಹಂಗರಗಿ, ಆರ್.ಟಿ.ಉತ್ತರಕರ, ಸುರೇಶ ಹಲಕುಡೆ, ಮುಂಬೈನ ಪಂಡಿತ ಗಿರೀಶ ಸಾರವಾಡ, ಬಸವರಾಜ ಕುಂಬಾರ, ಶ್ರೀಶೈಲ ಬೀಳೂರ, ಆನಂದ ಕಡಕೋಳ, ಸುನೀಲ ಚವ್ಹಾಣ ಇನ್ನಿತರರು ಉಪಸ್ಥಿತರಿದ್ದರು.

ಗಾನ ತರಂಗ ಸಂಗೀತ ಶಾಲೆಯ ಶಿಕ್ಷಕ ಶ್ರೀಶೈಲ ಬೀಳೂರ, ಶ್ರೀ ಗಿರೀಶ ಸಾರವಾಡ, ಜಗದೀಶ ಅಳ್ಳಗಿ ಮುಂತಾದವರಿಂದ ವಚನ ಸಂಗೀತ ಕಾರ್ಯಕ್ರಮ ಜರುಗಿತು.

# ಎಸ್‌ಐಆರ್: ಹೆಸರು ಸೇರ್ಪಡೆ, ತಿದ್ದುಪಡಿಗೆ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ–2026 (ಎಸ್ ಐಆರ್) ಪ್ರಕ್ರಿಯೆಗೆ ಸಂಬಂಧಿಸಿದಂತೆ ಕಳೆದ ಆ. 24 ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಈ ಪಟ್ಟಿಯಲ್ಲಿ ಹೆಸರು ಬಿಟ್ಟುಹೋಗಿರುವ ಅರ್ಹ ಮತದಾರರು ಹಾಗೂ ಹೊಸದಾಗಿ ಮತದಾರರ ಪಟ್ಟಿಗೆ ಸೇರ್ಪಡೆಯಾಗಲು ಬಯಸುವ ಸಾರ್ವಜನಿಕರಿಗೆ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 23ರವರೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳಾದ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ತಿಳಿಸಿದ್ದಾರೆ.

ಸೆಪ್ಟೆಂಬರ್ 19 ಮತ್ತು 20 ರಂದು ವಿಶೇಷ ಆಂದೋಲನ ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದಿರುವ ಅರ್ಹ ಮತದಾರರು ಮತ್ತು ಅಕ್ಟೋಬರ್ 01, 2026 ಕ್ಕೆ 18 ವರ್ಷ ಪೂರೈಸುವ ಯುವ ಮತದಾರರ ಅನುಕೂಲಕ್ಕಾಗಿ ದಿನಾಂಕ 19–09–2026 (ಶನಿವಾರ) ಮತ್ತು 20–09–2026 (ಭಾನುವಾರ) ರಂದು ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿ ವಿಶೇಷ ಆಂದೋಲನ ಹಮ್ಮಿಕೊಳ್ಳಲಾಗಿದೆ. ಈ ದಿನಗಳಲ್ಲಿ ಸಂಬಂಧಪಟ್ಟ ಮತಗಟ್ಟೆ ಅಧಿಕಾರಿಗಳು ಬೆಳಿಗ್ಗೆಯಿಂದಲೇ ತಮ್ಮ ತಮ್ಮ ಮತಗಟ್ಟೆಗಳಲ್ಲಿ ಲಭ್ಯವಿರುತ್ತಾರೆ. ಸಾರ್ವಜನಿಕರು ನೇರವಾಗಿ ಬಿ.ಎಲ್.ಓ.ಗಳನ್ನು ಭೇಟಿ ಮಾಡಿ ತಮ್ಮ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಬಹುದು.



ಹೆಸರು ಸೇರ್ಪಡೆ: ಹೊಸದಾಗಿ ಹೆಸರು ಸೇರ್ಪಡೆಗಾಗಿ ನಮೂನೆ–6ಎ: ಅನಿವಾಸಿ ಭಾರತೀಯರಿಗಾಗಿ ನಮೂನೆ–7: ಪಟ್ಟಿಯಿಂದ ಹೆಸರು ತೆಗೆದುಹಾಕಲು (ಆಕ್ಷೇಪಣೆ) ನಮೂನೆ–8: ವಿಳಾಸ ಬದಲಾವಣೆ, ಹೆಸರು ತಿದ್ದುಪಡಿ ಮತ್ತು ಗುರುತಿನ ಚೀಟಿ ಬದಲಾವಣೆಗಾಗಿ ಆನ್‌ಲೈನ್ ಹಾಗೂ ಕಚೇರಿ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ವಿಶೇಷ ಆಂದೋಲನದ ದಿನಗಳನ್ನು ಹೊರತುಪಡಿಸಿ, ಬಾಕಿ ಉಳಿದ ದಿನಗಳಲ್ಲಿ ಸಾರ್ವಜನಿಕರು ಸಂಬಂಧಿಸಿದ ತಹಶೀಲ್ದಾರ್ ಕಚೇರಿ ಅಥವಾ ಮತದಾರರ ನೋಂದಣಾಧಿಕಾರಿಗಳ ಕಚೇರಿಗೆ ತೆರಳಿ ಅರ್ಜಿ ಸಲ್ಲಿಸಬಹುದು. ಜೊತೆಗೆ, ಭಾರತೀಯ ಚುನಾವಣಾ ಆಯೋಗದ ಅಧಿಕೃತ ವೆಬ್‌ಸೈಟ್ https://voters.eci.gov.in/ (Voter Service Portal) ಮೂಲಕವೂ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶವಿದೆ. ಮಾಹಿತಿ ತಾರ್ಕಿಕವಾಗಿ ಹೊಂದಾಣಿಕೆಯಾಗದ ಮತ್ತು 2002ರ ಮತದಾರರ ಪಟ್ಟಿಗೆ ಮ್ಯಾಪಿಂಗ್ ಆಗದ ಜಿಲ್ಲೆಯ ಒಟ್ಟು 24,524 ಮತದಾರರಿಗೆ ಮತದಾರರ ನೋಂದಣಾಧಿಕಾರಿಗಳು ವಿಚಾರಣೆ ಪ್ರಕ್ರಿಯೆ ನಡೆಸುತ್ತಿದ್ದಾರೆ. ಇಂತಹ ಮತದಾರರಿಗೆ ಈಗಾಗಲೇ ನೋಟಿಸ್ ನೀಡಲಾಗುತ್ತಿದ್ದು, ನೋಟಿಸ್‌ನಲ್ಲಿಯೇ ವಿಚಾರಣೆಯ ಸ್ಥಳ ಹಾಗೂ ದಿನಾಂಕವನ್ನು ನಮೂದಿಸಲಾಗಿದೆ.

ನೋಟಿಸ್ ಪಡೆದ ಮತದಾರರು ನಿಗದಿತ ದಿನಾಂಕದಂದು ಅಗತ್ಯ ದಾಖಲೆಗಳೊಂದಿಗೆ ವಿಚಾರಣಾ ಸ್ಥಳಕ್ಕೆ ಹಾಜರಾಗಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಾಗಿ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ. ಜಿಲ್ಲೆಯ ಎಲ್ಲಾ ಅರ್ಹ ನಾಗರಿಕರು ಮತ್ತು ಯುವ ಮತದಾರರು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಂಡು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ದಾಖಲಿಸುವುದನ್ನು ಖಚಿತಪಡಿಸಿಕೊಳ್ಳಬೇಕಾಗಿ ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ಬಂಗ್ಲೆ ವಿರುದ್ಧ ಕ್ರಮಕ್ಕೆ ಕಾನಿಪ ಸಿಂದಗಿ ಘಟಕ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ವಿರುದ್ಧ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಹೆಸರಿನಲ್ಲಿ ದೂರು ನೀಡಿರುವುದನ್ನು ಖಂಡಿಸಿ, ಬಂಗ್ಲೆ ಮಲ್ಲಿಕಾರ್ಜುನ ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸಿಂದಗಿ ತಾಲೂಕು ಘಟಕದ ವತಿಯಿಂದ ಮಂಗಳವಾರ ತಹಶೀಲ್ದಾರ್ ಕರೆಪ್ಪ ಬೆಳ್ಳಿ ಅವರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯ ಮಲ್ಲಿಕಾರ್ಜುನ ಅಲ್ಲಾಪುರ, ಸಂಘದ ತಾಲೂಕಾಧ್ಯಕ್ಷ ಮಹಾಂತೇಶ ನೂಲಾನವರ, ಸಂಘದ ಮಾಜಿ ಅಧ್ಯಕ್ಷ ಆನಂದ ಶಾಬಾದಿ ಮಾತನಾಡಿ, ಬಂಗ್ಲೆ ಮಲ್ಲಿಕಾರ್ಜುನ ಅವರು ಚುನಾವಣಾ ಪ್ರಕ್ರಿಯೆಯ ಮೂಲಕ ಆಯ್ಕೆಯಾಗಿರುವ ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ವಿರುದ್ಧ ಯಾವುದೇ ಆಧಾರವಿಲ್ಲದ ಆರೋಪಗಳನ್ನು ಮಾಡುತ್ತಾ ದೂರು ನೀಡಿರುವುದು ಖಂಡನೀಯ. ಉದ್ದೇಶಪೂರ್ವಕವಾಗಿ ಸಂಘದ ರಾಜ್ಯಾಧ್ಯಕ್ಷರ ಘನತೆಗೆ ಧಕ್ಕೆ ತರುವ ಪ್ರಯತ್ನ ನಡೆಸಲಾಗುತ್ತಿದೆ. ಆದ್ದರಿಂದ ಬಂಗ್ಲೆ ಮಲ್ಲಿಕಾರ್ಜುನ ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಂಡು ಕ್ರಿಮಿನಲ್ ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ಪತ್ರಕರ್ತರ ಹಿತಾಸಕ್ತಿ, ವೃತ್ತಿ ಭದ್ರತೆ ಹಾಗೂ ಶ್ರೇಯೋಭಿವೃದ್ಧಿಗಾಗಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ. ಸಂಘದ ಚುನಾಯಿತ ಪದಾಧಿಕಾರಿಗಳ ವಿರುದ್ಧ ವೈಯಕ್ತಿಕ ದ್ವೇಷ ಅಥವಾ ಸಂಘದ ಘನತೆಗೆ ಧಕ್ಕೆ ತರುವ ಉದ್ದೇಶದಿಂದ ಆಧಾರರಹಿತ ದೂರುಗಳನ್ನು ನೀಡುವುದನ್ನು ಸಹಿಸಲು ಸಾಧ್ಯವಿಲ್ಲ. ಈ ಕುರಿತು ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಇಸ್ಮಾಯಿಲ್ ಶೇಖ, ಉಪಾಧ್ಯಕ್ಷ ಭೀಮು ಕೆಂಭಾವಿ, ಕಾರ್ಯದರ್ಶಿ ನವೀನ ಶೆಳ್ಳಗಿ, ಕಾರ್ಯಕಾರಿ ಸದಸ್ಯ ವಿನಯಕುಮಾರ ಅಗಸರ, ಸಿದ್ದು ಕಡಗಂಚಿ, ಸದಸ್ಯರಾದ ರಾಕೇಶ ಕಂಠಿಗೊಂಡ, ಶಿವಾನಂದ ಆಲಮೇಲ, ಗುಂಡು ಕುಲಕರ್ಣಿ, ಗುರುರಾಜ ಮಠ, ಸುದರ್ಶನ ಜಂಗಣ್ಣಿ, ಶಾಂತವೀರ ಹಿರೇಮಠ ಸೇರಿದಂತೆ ಇತರರು ಉಪಸ್ಥಿತರಿದ್ದರು.



## ಕಾರ್ಯನಿರತ ಪತ್ರಕರ್ತರ ಸಂಘದ ಸಿಂದಗಿ ತಾಲೂಕು ಘಟಕದಿಂದ ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ

# ಅರಳಿರಿ ನಿಮ್ಮದೇ ಹಾದಿಯಲ್ಲಿ

## ಜಯ್ ನುಡಿ (ವ್ಯಕ್ತಿತ್ವ ವಿಕಸನ ಕುರಿತ ಲೇಖನ ಮಾಲಿಕೆ)





■ ಉದಯರಶ್ಮಿ ದಿನಪತ್ರಿಕೆ

ಒಂದು ದಟ್ಟವಾದ ಕಾಡಿನಲ್ಲಿ ಕಾಗೆಯೊಂದು ವಾಸಿಸುತ್ತಿತ್ತು. ತಾನು ಜಗತ್ತಿನಲ್ಲೇ ಅತ್ಯಂತ ಸಂತೋಷದ ಹಕ್ಕಿ ಎಂದು ಅದು ಭಾವಿಸಿತ್ತು. ಆದರೆ ಒಂದು ದಿನ ಅದು ಬಿಳಿ ಹಂಸವನ್ನು ನೋಡಿತು. "ಹಂಸ ಎಷ್ಟು ಬಿಳಿಯಾಗಿದೆ, ನಾನು ಎಷ್ಟು ಕಪ್ಪಗಿದ್ದೇನೆ! ಹಂಸನೇ ಜಗತ್ತಿನ ಅತ್ಯಂತ ಸುಖಿ ಹಕ್ಕಿ" ಎಂದು ಕಾಗೆ ಯೋಚಿಸಿತು. ಕಾಗೆ ತನ್ನ ಅಳಲನ್ನು ಹಂಸನ ಮುಂದೆ ತೋಡಿಕೊಂಡಾಗ, ಹಂಸ ಹೇಳಿತು, "ನನಗೂ ಹಾಗೇ ಅನಿಸುತ್ತಿತ್ತು, ಆದರೆ ನಾನು ಎರಡು ಬಣ್ಣಗಳಿರುವ ಗಿಳಿಯನ್ನು ನೋಡುವವರೆಗೂ ಮಾತ್ರ!" ಗಿಳಿಯ ಬಳಿ ಹೋದರೆ ಅದು ಹೇಳಿತು, "ನನಗಿಂತ ನವಿಲು ಎಷ್ಟು ಸುಂದರವಾಗಿದೆ!". ಕೊನೆಗೆ ಕಾಗೆ ಮೃಗಾಲಯದಲ್ಲಿದ್ದ ನವಿಲಿನ ಬಳಿ ಹೋಗಿ ಕೇಳಿದಾಗ, ನವಿಲು ನಿಟ್ಟುಸಿರಿಟ್ಟು ಹೇಳಿತು, "ನನ್ನ ಈ ಅಂದದಿಂದಲೇ ನಾನು ಪಂಜರದಲ್ಲಿ ಬಂದಿಯಾಗಿದ್ದೇನೆ. ನಿನ್ನನ್ನು ಯಾರೂ ಪಂಜರದಲ್ಲಿ ಇಡುವುದಿಲ್ಲ. ನೀನೇ ಅದೃಷ್ಟವಂತ!"

### ನಿಜವಾದ ಘನತೆ

ಇದು ಕೇವಲ ಕಥೆಯಲ್ಲ, ಇಂದಿನ ನಮ್ಮ ಇನ್‌ಸ್ಟಾಗ್ರಾಮ್, ಲಿಂಕ್ಡ್‌ಇನ್ ಯುಗದ ಯುವ ಪೀಳಿಗೆಯ ಕಟು ವಾಸ್ತವ. ನಾವು ಬೇರೆಯವರ ಬದುಕಿನ ರಂಗುರಂಗಿನ ಮುಖಪುಟವನ್ನು ನೋಡಿ, ನಮ್ಮ ಪುಸ್ತಕದ ಒಳಗಿನ ಪುಟಗಳೊಂದಿಗೆ ಹೋಲಿಸಿಕೊಳ್ಳುತ್ತಾ ಹೋಲಿಕೆಯ ಕುಣಿಕೆಗೆ ಕೊರಳೊಡ್ಡುತ್ತಿದ್ದೇವೆ.

ಇನ್‌ಸ್ಟಾಗ್ರಾಮ್ ಜಗತ್ತು ಮತ್ತು ವಾಸ್ತವದ ಹೋಲಿಕೆ ಇಂದು



ನಾವು ಬೆಳಗ್ಗೆ ಕಣ್ಣುಬಿಟ್ಟ ತಕ್ಷಣ ಫೋನ್ ಕೈಗೆತ್ತಿಕೊಳ್ಳುತ್ತೇವೆ. ಇನ್‌ಸ್ಟಾಗ್ರಾಮ್‌ನಲ್ಲಿ ಸ್ನೇಹಿತನೊಬ್ಬ ದುಬಾರಿ ರೆಸ್ಟೋರೆಂಟ್‌ಗೆ ಹೋದ ಫೋಟೋ ಅಥವಾ ಐಫೋನ್ ಖರೀದಿಸಿದ ಪೋಸ್ಟ್ ನೋಡಿ ನಮ್ಮ ದಿನವನ್ನು ನಿರಾಸೆಯಿಂದ ಆರಂಭಿಸುತ್ತೇವೆ. "ಅವನ ಲೈಫ್ ಎಷ್ಟು ಚೆನ್ನಾಗಿದೆ, ನನ್ನ ಬದುಕು ಮಾತ್ರ ಹೀಗಿದೆ" ಎಂಬ ಸ್ವಯಂ-ಕರುಣೆ ನಮ್ಮನ್ನು ಆವರಿಸುತ್ತದೆ.ಇಂತಹ ದೈನಂದಿನ ಹೋಲಿಕೆಯ ಗದ್ದಲದ ನಡುವೆ, ಖ್ಯಾತ ಲೇಖಕ ಅರ್ನೆಸ್ಟ್ ಹೆಮಿಂಗ್ವೇ ಅವರ ಒಂದು ಅದ್ಭುತ ಉಕ್ತಿ

ನನಗೆನೆನಪಾಗುತ್ತಿದೆ.ಅವರನುಡಿನಮಗೆದಾರಿದೀಪವಾಗಬೇಕು: "ನಿಮ್ಮ ಸಹವರ್ತಿಗಿಂತ ನೀವು ಶ್ರೇಷ್ಠರಾಗಿರುವುದರಲ್ಲಿ ಯಾವುದೇ ಘನತೆ ಇಲ್ಲ; ನಿಮ್ಮ ಹಳೆಯ ನಿನಗಿಂತ ನೀವು ಉತ್ತಮರಾಗಿರುವುದೇ ನಿಜವಾದ ಘನತೆ".

### ಬೇರೆಯವರ ತಟ್ಟೆ

ಬೇರೆಯವರ ತಟ್ಟೆಯಲ್ಲಿರುವ ಸಿಹಿಯನ್ನು ನೋಡಿ ನಮ್ಮ ಕೈಯಲ್ಲಿರುವ ರೊಟ್ಟಿಯನ್ನು ದೂಷಿಸುವುದು ವ್ಯಕ್ತಿತ್ವ ವಿಕಸನಕ್ಕೆ ಮಾರಕ ಮೌನವಾಗಿ ಅರಳಿದ ಸಾಧಕರು ಜಗತ್ತಿನಲ್ಲಿ ದೊಡ್ಡ ಸಾಧನೆ ಮಾಡಿದವರೆಲ್ಲರೂ ತಮ್ಮ ಗಮನವನ್ನು ಬೇರೆಯವರ ಮೇಲಲ್ಲ, ಬದಲಿಗೆ ತಮ್ಮ ಮೇಲಷ್ಟೇ ಇಟ್ಟುಕೊಂಡಿದ್ದರು.

### ಮೌನವಾಗಿ ಅರಳಿ

ಇದಕ್ಕೆ ಅತ್ಯುತ್ತಮ ಮತ್ತು ತೀರಾ ಪ್ರಸಿದ್ಧವಲ್ಲದ ಉದಾಹರಣೆ ಎಂದರೆ ಭಾರತದ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ (ಖಖಖಔ) ಹಿರಿಯ ವಿಜ್ಞಾನಿಯಾಗಿದ್ದ ಡಾ. ವಿ.ಆರ್. ಲಲಿತಾಂಬಿಕಾ. ಗಗನಯಾನ್ ಯೋಜನೆಯ ನೇತೃತ್ವ ವಹಿಸಿದ್ದ ಅವರು ಸದಾ ಪ್ರಚಾರದಿಂದ ದೂರವಿದ್ದು, ಅತ್ಯಂತ ಮೌನವಾಗಿ ತಮ್ಮ ಕೆಲಸದಲ್ಲಿ ತೊಡಗಿಸಿಕೊಳ್ಳುತ್ತಿದ್ದರು. ಯಾವುದೇ ಮಾಧ್ಯಮಗಳ ಗದ್ದಲಕ್ಕೋ ಅಥವಾ ಇತರರ ಯಶಸ್ಸಿನ ಹೋಲಿಕೆಗೋ ಅವರು ತಲೆಕೆಡಿಸಿಕೊಳ್ಳಲಿಲ್ಲ.

ಅವರ ಬದುಕು ನಮಗೆ ಕಲಿಸುವ ಪಾಠವೊಂದೇ, ಸದ್ದಿಲ್ಲದೆ ನಿಮ್ಮ ಕೆಲಸದ ಮೇಲೆ ಗಮನ ಹರಿಸಿ.

### ಉತ್ತಮವಾಗಿ ಮಾಡಿ

ಮಾಯಾ ಏಂಜೆಲೋ ಅವರ ಪ್ರಸಿದ್ಧ ನುಡಿಯಂತೆ: "ನಿಮಗೆ ಸಾಧ್ಯವಿರುವ ಅತ್ಯುತ್ತಮ ಕೆಲಸವನ್ನು ನೀವು ಮಾಡಿ. ನೀವು ಉತ್ತಮವಾಗಿ ತಿಳಿದುಕೊಂಡಾಗ, ಇನ್ನೂ ಉತ್ತಮವಾಗಿ ಮಾಡಿ". ನಮ್ಮ ಸ್ಪರ್ಧೆ ಇರಬೇಕಿರುವುದು ಕೇವಲ ನಮ್ಮೊಂದಿಗೆ ಮಾತ್ರ.

### ಲಿಂಕ್ಡ್‌ಇನ್ ಒತ್ತಡ

ಒತ್ತಡ ಮತ್ತು ಸದ್ದಿಲ್ಲದ ಕ್ರಾಂತಿ ಇಂದಿನ ಕಾರ್ಪೊರೇಟ್ ಜಗತ್ತಿನಲ್ಲಿ ಲಿಂಕ್ಡ್‌ಇನ್‌ನಲ್ಲಿ ಬೇರೆಯವರ ಪ್ರಮೋಷನ್, ಹೊಸ ಕೆಲಸದ ಪೋಸ್ಟ್‌ಗಳನ್ನು ನೋಡಿ ತಕ್ಷಣ ಯುವ ಉದ್ಯೋಗಿಗಳಲ್ಲಿ ಆತಂಕ ಶುರುವಾಗುತ್ತದೆ. ಕಂಪ್ಯೂಟರ್ ಸೈನ್ಸ್ ಜಗತ್ತಿನಲ್ಲಿ ಮಹತ್ತರ ಬದಲಾವಣೆ ತಂದರೂ ಸದಾ ತೆರೆಯ ಮರೆಯಲ್ಲೇ ಉಳಿದ ಸಾಫ್ಟ್‌ವೇರ್ ಪ್ರೋಗ್ರಾಮರ್ ಲಿನಸ್ ಟೋರ್ವಾಲ್ಡ್ಸ್ ಅವರ ಉದಾಹರಣೆ ಇಲ್ಲಿ ಸೂಕ್ತವಾಗಿದೆ. ಅವರು ಲಿನಕ್ಸ್ ಆಪರೇಟಿಂಗ್ ಸಿಸ್ಟಮ್ ಅನ್ನು ಜಗತ್ತಿಗೆ ಉಚಿತವಾಗಿ ನೀಡಿದರು. ಮೈಕ್ರೋಸಾಫ್ಟ್



ಅಥವಾ ಆಪಲ್‌ನಂತಹ ದೈತ್ಯ ಸಂಸ್ಥೆಗಳ ಶ್ರೀಮಂತಿಕೆಯೊಂದಿಗೆ ಅವರು ಎಂದಿಗೂ ತಮ್ಮನ್ನು ಹೋಲಿಸಿಕೊಳ್ಳಲಿಲ್ಲ. ಅವರು ತಮ್ಮದೇ ಆದ ಸರಳ ಜಗತ್ತಿನಲ್ಲಿ ಮೌನವಾಗಿ ಕೆಲಸ ಮಾಡಿದರು.

ಅವರು ಒಮ್ಮೆ ಹೇಳಿದ್ದರು: "ನಾನು ಸೋಷಿಯಲ್ ಮೀಡಿಯಾದ ರೇಸ್‌ನಲ್ಲಿಲ್ಲ, ನನ್ನ ಕೋಡಿಂಗ್ ಜಗತ್ತಿನ ಮೌನವೇ ನನ್ನ ಶಕ್ತಿ."

### ಆಂತರಿಕ ಶಾಂತತೆ

ಇಂತಹ ಆಂತರಿಕ ಶಾಂತತೆ ಇಂದಿನ ತಲೆಮಾರಿಗೆ ವರ್ಕ್‌ಪ್ಲೇಸ್ ಒತ್ತಡದಿಂದ ದೂರವಿರಲು ಅತ್ಯಂತ ಅವಶ್ಯಕವಾಗಿದೆ.

### ನಿಮ್ಮದೇ ಆದ ವೇಗದಲ್ಲಿ ಸಾಗಿ ಸ್ವಂತ ಹಾದಿಯಲ್ಲಿ ಸಾಗಿ

ಕೊನೆಯದಾಗಿ, ಬದುಕಿನಲ್ಲಿ ಪ್ರತಿಯೊಬ್ಬರ ಹಾದಿಯೂ ವಿಭಿನ್ನವಾಗಿರುತ್ತದೆ. ಸೂರ್ಯ ಮತ್ತು ಚಂದ್ರ ಇಬ್ಬರೂ ಹೊಳೆಯುತ್ತಾರೆ, ಆದರೆ ತಮ್ಮದೇ ಆದ ಸಮಯ ಬಂದಾಗ ಮಾತ್ರ! ಭಗವದ್ಗೀತೆಯಲ್ಲಿ ಶ್ರೀಕೃಷ್ಣನು ಹೇಳುವಂತೆ, "ಬೇರೆಯವರ ಹಾದಿಯನ್ನು ಅನುಕರಿಸಿ ಪರಿಪೂರ್ಣತೆ ಪಡೆಯುವುದಕ್ಕಿಂತ, ನಿಮ್ಮ ಸ್ವಂತ ಹಾದಿಯಲ್ಲಿ ಸಾಗುವುದೇ ಶ್ರೇಷ್ಠ".ಬೇರೆಯವರ ಯಶಸ್ಸಿನ ಸದ್ದಿಗೆ ನಿಮ್ಮ ಮನಸ್ಸಿನ ನೆಮ್ಮದಿಯನ್ನು ಅಡವಿಡಬೇಡಿ. ಇಂದಿನಿಂದಲೇ ಹೋಲಿಕೆಯ ಕುಣಿಕೆಯಿಂದ ಹೊರಬನ್ನಿ, ನಿಮ್ಮ ಆಂತರಿಕ ಮೌನ ಮತ್ತು ಪರಿಶ್ರಮವನ್ನು ನಿಮ್ಮ ಬಲವಾಗಿಸಿಕೊಳ್ಳಿ. ಆಗ ನಿಮ್ಮ ವ್ಯಕ್ತಿತ್ವವು ಜಗತ್ತೇ ಬೆರಗಾಗುವಂತೆ ತನ್ನದೇ ಆದ ವಿಶಿಷ್ಟ ಶೈಲಿಯಲ್ಲಿ ಅರಳುತ್ತದೆ. ಜಗತ್ತನ್ನು ನಿಮ್ಮೆಡೆ ಸೆಳೆಯುತ್ತದೆ.

ಲೇಖನ
– ಜಯಶ್ರೀ ಜೆ ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು
ಬೆಳಗಾವಿ
ಮೊ: 9449234142



# ಸೆ.13ರಂದು ಯಡ್ರಾಮಿ ಶ್ರೀಗಳ ಮೌನ ಅನುಷ್ಠಾನ ಮುಕ್ತಾಯ

■ ಉದಯರಶ್ಮಿ ದಿನಪತ್ರಿಕೆ



ಕಲಬುರ್ಗಿ: ಜಿಲ್ಲೆಯ ಯಡ್ರಾಮಿ ಪಟ್ಟಣದ ಶ್ರೀ ಮುರುಗೇಂದ್ರ ಶಿವಯೋಗಿ ವಿರಕ್ತಮಠವು

ಪ್ರತಿ ವರ್ಷದಂತೆ ಈ ವರ್ಷವು, ಶ್ರಾವಣ ಮಾಸದ ಪ್ರದಕ್ಷಿಣೆ ಭಜನಾ ಕಾರ್ಯಕ್ರಮವು ಒಂದು ತಿಂಗಳು ಪರ್ಯಂತರ ವ್ಯವಸ್ಥಿತವಾಗಿ ನಡೆಸಿಕೊಂಡು ಬಂದಿದ್ದು.ಇದರ ಮುಕ್ತಾಯವು ದಿ॥12 ಮತ್ತು 13ನೇಸೆಪ್ಟಂಬರ ರವಿವಾರದಂದು ನಡೆಯಲಿದೆ.

ದಿನಾಂಕ 12 ರ ಸೆಪ್ಟೆಂಬರ್ ಶನಿವಾರ ಬೆಳಿಗ್ಗೆ 6 ಗಂಟೆಗೆ ಸಪ್ತಾಹ ಭಜನೆ ಪ್ರಾರಂಭವಾಗಿ 13ರ ರವಿವಾರ ಬೆಳಗಿನ ವರೆಗೆ ಜರಗುವದು ನಂತರ ಶ್ರೀ ಮುರುಘೇಂದ್ರ ಶಿವಯೋಗಿ ಕರ್ತೃ ಗದ್ದಿಗೆಗೆ ರುದ್ರಾಭಿಷೇಕ,ನೆರವೇರಿದ

ಬಳಿಕ, ಲೋಕ ಕಲ್ಯಾಣಕ್ಕಾಗಿ ಶ್ರೀ ಮಠದ ಪೀಠಾಧ್ಯಕ್ಷರಾದ ಶ್ರೀ. ಮ.ನಿ.ಪ್ರ.ಸಿದ್ದಲಿಂಗ ಮಹಾಸ್ವಾಮಿಗಳು ಶ್ರಾವಣ ಮಾಸದಿ ಒಂದು ಮಾಸ ಪೂರ್ಣ ಕೈಗೊಂಡಿದ್ದ ಮೌನ ಅನುಷ್ಠಾನವು, ಸಮಾಪ್ತಿಯಾಗಲಿದೆ, ಹಾಗು ಭಜನೆಯ ಮೆರವಣಿಗೆಯು ನಗರದ ಪ್ರಮುಖ ಬೀದಿಗಳಲ್ಲಿ ಹಾಯ್ದು ಮರಳಿ ಶ್ರೀ ಮಠಕ್ಕೆ ತಲುಪುವದು, ಶ್ರೀಗಳ ಆಶೀರ್ವಚನ ತದನಂತರ ರಥೋತ್ಸವ ಜರಗಿದ ತರುವಾಯ ಮಹಾ ಪ್ರಸಾದದೊಂದಿದೆ ಮಂಗಲಗೊಳ್ಳುವದು ಆದ- 'ಕಾರಣ ಭಕ್ತಾದಿಗಳೆಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಶ್ರೀ ಮುರುಗೇಂದ್ರ ಶಿವಯೋಗಿಗಳ ಮತ್ತು, ಶ್ರೀ ಸಿದ್ದರಾಮ ಶಿವಯೋಗಿಗಳವರ ಕೃಪೆಗೆ ಪಾತ್ರರಾಗಬೇಕಾಗಿ ಶ್ರೀ ಮಠವು ಪ್ರಕಟಣೆಯಲ್ಲಿ ತಿಳಿಸಿದೆ.

## ಹಿರಿಯ ಸಿವಿಲ್ ನ್ಯಾಯಾಧೀಶ ಅರವಿಂದ ಹಾಗರಗಿ ಹೇಳಿಕೆ

# ನಿಯಮ ತಿಳಿದುಕೊಳ್ಳಲು ಹಿರಿಯರಿಗೆ ಸಲಹೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಹಿರಿಯ ನಾಗರಿಕರ ರಕ್ಷಣೆಗಾಗಿ ಜಾರಿಗೆ ತಂದಿರುವ 2007ರ ಕಾಯ್ದೆ ಜಾರಿಗೆ ತಂದಿದ್ದು, ಈ ಕಾಯ್ದೆ ಮತ್ತು ನಿಯಮಗಳನ್ನು ಹಿರಿಯ ನಾಗ-ರಿಕರು ತಿಳಿದುಕೊಳ್ಳಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಹಾಗರಗಿ ಹೇಳಿದರು. ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಹಿರಿಯ ನಾಗರಿಕರ ಕಾಯ್ದೆ -2007, ಹಿರಿಯ ನಾಗರಿಕರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳು ಸೈಬರ್ ಮತ್ತು ಡಿಜಿಟಲ್ ವಂಚನೆ ಕುರಿತು ಹಮ್ಮಿಕೊಳ್ಳಲಾಗಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಆದ್ದರಿಂದ ಕಾರ್ಯಕ್ರಮದಲ್ಲಿ ಪಾಲ್ಗೊಂಡಿರುವ ಹಿರಿಯ ನಾಗರಿಕರಿಗೆ ಇರುವ ಕಾನೂನುಗಳ ಕುರಿತು ಅಧಿಕಾರಿಗಳು ಮಾಹಿತಿ ನೀಡಬೇಕು ಎಂದರು. ತಾಲೂಕಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಗುರುಶಾಂತಪ್ಪ ಬೆಳ್ಳುಂಡಗಿ ಮಾತನಾಡಿ, ಹಿರಿಯ ನಾಗರಿಕರಿಗೆ ಇರುವ ಸರ್ಕಾರಿ ಸೌಲಭ್ಯಗಳ ಕುರಿತು ತೊಂದರೆ ಎದುರಾಗದಂತೆ, ಸೌಲಭ್ಯಗಳನ್ನು ತಲುಪಿಸಲು ಹಾಜರಿದ್ದ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಂಪನ್ಮೂಲ ವ್ಯಕ್ತಿಗಳಾದ ಬಾಬು ಅವತಾಡೆ ಮಾತನಾಡಿ, ಹಿರಿಯ ನಾಗರಿಕರ ಕಾಯ್ದೆಯ ಪ್ರಮುಖ ಅಂಶಗಳ ಕುರಿತು, ಆಸ್ತಿ ವರ್ಗಾವಣೆ ಹಾಗೂ ನಿರ್ವಹಣಾ ವೆಚ್ಚಗಳ ಕುರಿತು ಹಾಜರಿದ್ದ ಹಿರಿಯ ನಾಗರಿಕಗೆ ಅರಿವು ಮೂಡಿಸಿದರು,

ನ್ಯಾಯವಾದಿ ಆರ್. ಕೆ. ಪೂಜಾರಿ ಮಾತನಾಡಿ, ಇತ್ತೀಚಿಗೆ ಎದುರಾಗುತ್ತಿರುವ ಡಿಜಿಟಲ್ ವಂಚನೆ ಕುರಿತು ಹಾಗೂ ಹಿರಿಯ ನಾಗರಿಕರಿಗೆ ಇರುವ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳ ಕುರಿತು ಮಾಹಿತಿ ನೀಡಿದರು. ಸಾ ವ ಾ ಜಿ - ಕ ಕಾರ್ಯಕರ್ತೆ ಶ್ರೀಮತಿ ಗುಜ್ಜೂರ ಅವರನ್ನು ಇದೇ ವೇಳೆ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಎಸ್.ಪಿ.ಬಿರಾದಾರ, ಎಸ್.ಎಲ್. ಇಂಗಳೇಶ್ವರ, ಜಗದೀಶ ಕೆ. ವಿಜಯಲಕ್ಷ್ಮೀ ಬಾಳಿ ಹಾಗೂ ವಿವಿಧ ಇಲಾಖೆಯ ತಾಲೂಕು ಮಟ್ಟದ ಅಧಿಕಾ-ರಿಗಳು, ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

# ಶಿಕ್ಷಕರ ಸೇವೆಗೆ ಸುಲ್ತಾನ ಗೋಲ್ಡ್‌ಂಡ್ ಡೈಮಂಡ್ಸ್‌ನಿಂದ ಗೌರವ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಶಿಕ್ಷಣ ಇಲಾಖೆಯಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿರುವ ಶಿಕ್ಷಕರನ್ನು ಗುರುತಿಸಿ ಗೌರವಿಸುವುದು ಇಲಾಖೆಗೆ ನೀಡುವ ಅತ್ಯುತ್ತಮ ಗೌರವವಾಗಿದೆ. ಶಿಕ್ಷಕರ ಸೇವೆಯನ್ನು ಗುರುತಿಸಿ ಪ್ರಶಸ್ತಿ ನೀಡುತ್ತಿರುವ ಸುಲ್ತಾನ ಗೋಲ್ಡ್ ಂಡ್ ಡೈಮಂಡ್ಸ್ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದು ನಗರವಲಯ ಕ್ಷೇತ್ರ ಶಿಕ್ಷಣಾಧಿಕಾರಿ ರಾಘವೇಂದ್ರ ಹೊಸೂರ ಹೇಳಿದರು.

ನಗರದ ಸುಲ್ತಾನ ಗೋಲ್ಡ್ ಂಡ್ ಡೈಮಂಡ್ಸ್ ಮಳಿಗೆಯಲ್ಲಿ ರವಿವಾರ ಶಿಕ್ಷಕರ ದಿನಾಚರಣೆ ನಿಮಿತ್ಯ ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿದ ಶಿಕ್ಷಕರನ್ನು ಗುರುತಿಸಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ನಗರದಲ್ಲಿ ಶಿಕ್ಷಕರ ದಿನಾಚರಣೆ ಅಂಗವಾಗಿ ಸುಲ್ತಾನ ಗೋಲ್ಡ್ ಂಡ್ ಡೈಮಂಡ್ಸ್ ವತಿಯಿಂದ ಆಯೋಜಿಸಿದ್ದ ಉತ್ತಮ ಶಿಕ್ಷಕರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಶಿಕ್ಷಕರ ಶೈಕ್ಷಣಿಕ ಸೇವೆಯನ್ನು ಗುರುತಿಸಿ ಗೌರವಿಸುವ ಇಂತಹ ಕಾರ್ಯಗಳು ಇನ್ನಷ್ಟು ಶಿಕ್ಷಕರಿಗೆ ಪ್ರೇರಣೆಯಾಗಲಿವೆ. ಸಮಾಜಮುಖಿ ಕಾರ್ಯಗಳ ಮೂಲಕ ಸಂಸ್ಥೆ ಮತ್ತಷ್ಟು ಬೆಳೆಯಲಿ ಎಂದು ಹಾರೈಸಿದರು.

ನೌಕರ ಸಂಘದ ಅಧ್ಯಕ್ಷ ಸುರೇಶ ಶಡಶ್ಯಾಳ ಮಾತನಾಡಿ, ಕೇವಲ ವ್ಯಾಪಾರ ಮತ್ತು ಲಾಭ ಗಳಿಕೆಗೆ ಸೀಮಿತವಾಗಿರುವ ಇಂದಿನ ಸಂದರ್ಭದಲ್ಲಿ ಸಾಮಾಜಿಕ ಕಳಕಳಿಯೊಂದಿಗೆ ಶಿಕ್ಷಕರನ್ನು ಗುರುತಿಸಿ ಗೌರವಿಸುತ್ತಿರುವುದು ಉತ್ತಮ ಕಾರ್ಯವಾಗಿದೆ. ಶಿಕ್ಷಕರ ಸೇವೆಯನ್ನು ಸಮಾಜದ ಮುಂದೆ ಗುರುತಿಸುವ ಮೂಲಕ ಸಂಸ್ಥೆ ಮಾದರಿ ಕಾರ್ಯ ಮಾಡಿದೆ ಎಂದರು.

ಜಿಲ್ಲಾ ನೌಕರರ ಸಂಘದ ಖಜಾಂಚಿ ಜುಬೇರ ಕೆರೂರ ಮಾತನಾಡಿ, ಶಿಕ್ಷಣ ಇಲಾಖೆಯಲ್ಲಿ ಉತ್ತಮ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರನ್ನು ಗುರುತಿಸಿ ಸುಲ್ತಾನ ಗೋಲ್ಡ್‌ಂಡ್ ಡೈಮಂಡ್ಸ್ ಸಂಸ್ಥೆ ನೀಡುತ್ತಿರುವ ಪ್ರಶಸ್ತಿ ಗೌರವಯುತವಾಗಿದೆ. ಶಿಕ್ಷಕರ ಸೇವೆಗೆ ದೊರೆಯುವ ಇಂತಹ ಗೌರವಗಳು ಮತ್ತಷ್ಟು ಉತ್ತಮ ಕಾರ್ಯ ಮಾಡಲು ಪ್ರೇರಣೆ ನೀಡುತ್ತವೆ ಎಂದು ಹೇಳಿದರು.

ಜಿಲ್ಲಾ ಶಿಕ್ಷಕ ಸಂಘದ ಸಂಘಟನಾ ಕಾರ್ಯದರ್ಶಿ ಕಬೂಲ ಕೊಕಟನೂರ, ಶಿಕ್ಷಕ ಮಂಜುನಾಥ ಅರೇಶಂಕರ ಸೇರಿದಂತೆ ಪ್ರಶಸ್ತಿ ಪಡೆದ ಎಲ್ಲ ಶಿಕ್ಷಕರು ಮಾತನಾಡಿ, ಶಿಕ್ಷಕರ ಸೇವೆಯನ್ನು ಗುರುತಿಸಿ ಗೌರವಿಸಿರುವುದಕ್ಕೆ ಸುಲ್ತಾನ ಗೋಲ್ಡ್ ಂಡ್ ಡೈಮಂಡ್ಸ್ ಸಂಸ್ಥೆಗೆ ಕೃತಜ್ಞತೆ ಸಲ್ಲಿಸಿದರು.



## 3,78,00,000 ರೂಪಾಯಿ ವೆಚ್ಚದಲ್ಲಿ 12,000 ಅಜೋಲಾ ಘಟಕಗಳ ಸ್ಥಾಪನೆಗೆ ಚಾಲನೆ

# ರಾಜ್ಯದಲ್ಲಿ ಜಾನುವಾರುಗಳಿಗೆ ಪೌಷ್ಟಿಕ ಪೂರಕ ಮೇವು ಅಭಿವೃದ್ಧಿ

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ರಾಜ್ಯದಲ್ಲಿ ಜಾನುವಾರುಗಳಿಗೆ, ಅದರಲ್ಲೂ ವಿಶೇಷವಾಗಿ ಹಾಲು ನೀಡುವ ದನ-ಕರುಗಳಿಗೆ ಸ್ಥಳೀಯವಾಗಿಯೇ ಪೌಷ್ಟಿಕ ಪೂರಕ ಮೇವನ್ನು ಒದಗಿಸುವ ಸಲುವಾಗಿ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆಯು ಅಜೋಲಾ ಉತ್ಪಾದನಾ ಘಟಕಗಳನ್ನು ಉತ್ತೇಜಿಸಲು ಮಹತ್ವದ ಯೋಜನೆ ಹಮ್ಮಿಕೊಂಡಿದೆ. ಮಳೆಯ ಅಭಾವ, ಹಸಿರು ಮೇವಿನ ಕೊರತೆ ಹಾಗೂ ವ್ಯತ್ಯಾಸದ ಸಂದರ್ಭಗಳಲ್ಲಿ ಪ್ರೋಟೀನ್, ಖನಿಜಾಂಶಗಳು ಸೇರಿದಂತೆ ಉತ್ತಮ ಪೌಷ್ಟಿಕಾಂಶಗಳನ್ನು ಹೊಂದಿರುವ ಅಜೋಲಾವನ್ನು ಪೂರಕ ಆಹಾರವಾಗಿ ಬಳಸಬಹುದಾಗಿದೆ.

ಈ ಯೋಜನೆಯಡಿ ರಾಜ್ಯದ ಎಲ್ಲಾ 31 ಜಿಲ್ಲೆಗಳ 240 ತಾಲ್ಲೂಕುಗಳಲ್ಲಿ ಒಟ್ಟು 3,78,00,000 ರೂಪಾಯಿಗಳ ವೆಚ್ಚದಲ್ಲಿ 12,000 ಅಜೋಲಾ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲು ಜಿಲ್ಲಾವಾರು ಭೌತಿಕ ಮತ್ತು ಆರ್ಥಿಕ ಗುರಿಯನ್ನು ನಿಗದಿಪಡಿಸಲಾಗಿದೆ. ಪ್ರತಿ ಘಟಕ ಸ್ಥಾಪನೆಗೆ ಅಂದಾಜು 3,150 ರೂಪಾಯಿ ವೆಚ್ಚವಾಗಲಿದೆ. ಬೆಳಗಾವಿ ಜಿಲ್ಲೆಯಲ್ಲಿ 15 ತಾಲ್ಲೂಕುಗಳಿದ್ದು 750 ಘಟಕಗಳಿಗೆ 23,62,500 ರೂಪಾಯಿ ನಿಗದಿಪಡಿಸಲಾಗಿದೆ. ವಿಜಯಪುರ ಜಿಲ್ಲೆಯ 13 ತಾಲ್ಲೂಕುಗಳಿಗೆ 650 ಘಟಕಗಳಿಗೆ 20,47,500 ರೂಪಾಯಿ ಹಾಗೂ ಉತ್ತರ ಕನ್ನಡ ಜಿಲ್ಲೆಯ 12 ತಾಲ್ಲೂಕುಗಳಿಗೆ 600 ಘಟಕಗಳಿಗೆ 18,90,000 ರೂಪಾಯಿ ವೆಚ್ಚ ಮಾಡಲು ನಿರ್ಧರಿಸಲಾಗಿದೆ. ಕಲಬುರಗಿ ಜಿಲ್ಲೆಯ 11 ತಾಲ್ಲೂಕುಗಳಿಗೆ 550 ಘಟಕಗಳಿಗಾಗಿ 17,32,500 ರೂಪಾಯಿ ವೆಚ್ಚವಾಗಲಿದೆ.

ಬಾಗಲಕೋಟೆ ಜಿಲ್ಲೆಯ 10 ತಾಲ್ಲೂಕು ಮತ್ತು ತುಮಕೂರು ಜಿಲ್ಲೆಯ 10 ತಾಲ್ಲೂಕುಗಳಿಗೆ ತಲಾ 500 ಘಟಕಗಳಂತೆ ತಲಾ 15,75,000 ರೂಪಾಯಿಗಳನ್ನು ನಿಗದಿಗೊಳಿಸಲಾಗಿದೆ. ಚಿಕ್ಕಮಗಳೂರು ಜಿಲ್ಲೆಯ 9 ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆಯ 9 ತಾಲ್ಲೂಕು ಹಾಗೂ ಮೈಸೂರು ಜಿಲ್ಲೆಯ 9 ತಾಲ್ಲೂಕುಗಳಿಗೆ ತಲಾ 450 ಘಟಕಗಳನ್ನು ಸ್ಥಾಪಿಸಲು ತಲಾ 14,17,500 ರೂಪಾಯಿ ಕಾಯ್ದಿರಿಸಲಾಗಿದೆ.

ಬೀದರ್ ಜಿಲ್ಲೆಯ 8 ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆಯ 8 ತಾಲ್ಲೂಕು, ಧಾರವಾಡ ಜಿಲ್ಲೆಯ 8 ತಾಲ್ಲೂಕು, ಹಾಸನ ಜಿಲ್ಲೆಯ 8 ತಾಲ್ಲೂಕು, ಹಾವೇರಿ ಜಿಲ್ಲೆಯ 8 ತಾಲ್ಲೂಕು ಮತ್ತು ರಾಯಚೂರು ಜಿಲ್ಲೆಯ 8 ತಾಲ್ಲೂಕುಗಳಿಗೆ ತಲಾ 400 ಘಟಕಗಳನ್ನು ಹಂಚಿಕೆ ಮಾಡಲಾಗಿದ್ದು, ಪ್ರತಿಯೊಂದು ಜಿಲ್ಲೆಗೆ ತಲಾ 12,60,000 ರೂಪಾಯಿ ಅನುದಾನ ನೀಡಲಾಗಿದೆ.

ಗದಗ ಜಿಲ್ಲೆಯ 7 ತಾಲ್ಲೂಕು, ಕೊಪ್ಪಳ ಜಿಲ್ಲೆಯ 7 ತಾಲ್ಲೂಕು, ಮಂಡ್ಯ ಜಿಲ್ಲೆಯ 7 ತಾಲ್ಲೂಕು, ಶಿವಮೊಗ್ಗ ಜಿಲ್ಲೆಯ 7 ತಾಲ್ಲೂಕು ಮತ್ತು ಉಡುಪಿ ಜಿಲ್ಲೆಯ 7 ತಾಲ್ಲೂಕುಗಳಿಗೆ ತಲಾ 350 ಘಟಕಗಳಿಗೆ ತಲಾ 11,02,500 ರೂಪಾಯಿಗಳನ್ನು ನಿಗದಿಪಡಿಸಲಾಗಿದೆ.

ಚಿತ್ರದುರ್ಗ ಜಿಲ್ಲೆಯ 6 ತಾಲ್ಲೂಕು, ದಾವಣಗೆರೆ ಜಿಲ್ಲೆಯ 6 ತಾಲ್ಲೂಕು, ಕೋಲಾರ ಜಿಲ್ಲೆಯ 6 ತಾಲ್ಲೂಕು, ವಿಜಯನಗರ ಜಿಲ್ಲೆಯ 6 ತಾಲ್ಲೂಕು ಹಾಗೂ ಯಾದಗಿರಿ ಜಿಲ್ಲೆಯ 6 ತಾಲ್ಲೂಕುಗಳಿಗೆ ತಲಾ 300 ಘಟಕಗಳ ಗುರಿ ನೀಡಲಾಗಿದ್ದು, ತಲಾ 9,45,000 ರೂಪಾಯಿ ವೆಚ್ಚವಾಗಲಿದೆ.

ಬೆಂಗಳೂರು ನಗರ ಜಿಲ್ಲೆಯ 5 ತಾಲ್ಲೂಕು, ಬಳ್ಳಾರಿ ಜಿಲ್ಲೆಯ 5 ತಾಲ್ಲೂಕು, ಚಾಮರಾಜನಗರ ಜಿಲ್ಲೆಯ 5 ತಾಲ್ಲೂಕು, ಕೊಡಗು ಜಿಲ್ಲೆಯ 5 ತಾಲ್ಲೂಕು ಮತ್ತು ರಾಮನಗರ 5 ತಾಲ್ಲೂಕುಗಳಿಗೆ ತಲಾ 250 ಘಟಕ ಸ್ಥಾಪನೆಗೆ ತಲಾ 7,87,500 ರೂಪಾಯಿ ನೀಡಲಾಗುತ್ತಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ 4 ತಾಲ್ಲೂಕುಗಳಿಗೆ 200 ಘಟಕ ಸ್ಥಾಪಿಸಲು 6,30,000 ರೂಪಾಯಿ ವೆಚ್ಚ ಮಾಡಲಾಗುವುದು.

ತಾಂತ್ರಿಕ ಹಾಗೂ ವೆಚ್ಚದ ವಿವರ: ಈ ಅಜೋಲಾ ಘಟಕಗಳನ್ನು ರೈತರ ಮನೆ ಅಥವಾ ಕೊಟ್ಟಿಗೆಯ ಸಮೀಪವೇ ಕಡಿಮೆ ಸ್ಥಳದಲ್ಲಿ ನಿರ್ಮಿಸಬಹುದಾಗಿದೆ. ಸುಮಾರು 10 ಅಡಿ ಉದ್ದ, 4 ಅಡಿ ಅಗಲ ಹಾಗೂ 1 ಅಡಿ ಆಳದ (2.60 ಮೀ. ಥ 1.60 ಮೀ.) ಅಳತೆಯಲ್ಲಿ ಘಟಕವನ್ನು ನಿರ್ಮಿಸಲಾಗುತ್ತದೆ.

ಪ್ರತಿ ಘಟಕದ ಒಟ್ಟು ವೆಚ್ಚವಾದ 3,150 ರೂಪಾಯಿ* ಯಲ್ಲಿ ಸಾಮಗ್ರಿ ಹಾಗೂ ಕೂಲಿ ವೆಚ್ಚ ಸೇರಿದೆ. ಯುವಿ-ಸ್ಟೆಬಿಲೈಸ್ಡ್ ಎಚ್‌ಡಿಪಿಇ ಶೀಟ್ (450 ಉಖಒ, 10ಥ6 ಅಡಿ) 1,350 ರೂಪಾಯಿ ಶೇಕಡಾ 80 ರಷ್ಟು ನೆರಳು ಬಲೆ (ಖುಚಿಜಜ ಓಜಣ) ಮತ್ತು ಬಿದಿರು/ಜಿಐ ಫ್ರೇಮ್ 650 ರೂಪಾಯಿ

ಫಲವತ್ತಾದ ಮಣ್ಣು, ಸಗಣಿ ಮತ್ತು ಸೂಪರ್ ಫಾಸ್ಫೇಟ್ ಮಿಶ್ರಣ 250 ರೂಪಾಯಿ

ಅಜೋಲಾ ತಳಿ/ಬೀಜ (ಖಣಚಿಡಿಣಜಡಿ ಅಣಟ-ಣಣಡಿಜ/ಖಟಿಂಭಿಣಟಣಟ) 2 ಕೆಜಿ 200 ರೂಪಾಯಿ

(ಸಾಮಗ್ರಿಗಳ ಒಟ್ಟು ವೆಚ್ಚ: 2,450 ರೂಪಾಯಿ) ಸ್ಥಳ ಸಿದ್ಧತೆ, ತೊಟ್ಟಿ ಅಳವಡಿಕೆ, ಸಂರಕ್ಷಣೆ ಮತ್ತು ಬೀಜ ಬಿತ್ತನೆ ಕೆಲಸಕ್ಕಾಗಿ 2 ಮಾನವ ದಿನಗಳ ಕೂಲಿ ವೆಚ್ಚ (ದರ ದಿನಕ್ಕೆ 350 ರೂ. ನಂತೆ) 700 ರೂಪಾಯಿ.

ಅನುಷ್ಠಾನ ಮತ್ತು ಮಾರ್ಗದರ್ಶಿ ಸೂತ್ರಗಳು: ಜಿಲ್ಲೆಗೆ ನಿಗದಿಪಡಿಸಿದ ಗುರಿಯನ್ನು ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿವಾರು ಹಂಚಿಕೆ ಮಾಡಿ, ಸೂಕ್ತ ಸ್ಥಳ ಮತ್ತು ನೀರಿನ ಲಭ್ಯತೆ ಇರುವ ಜಾನುವಾರು ಸಾಕಣೆದಾರರನ್ನು ಆದ್ಯತೆಯ ಮೇಲೆ ಆಯ್ಕೆ ಮಾಡಲಾಗುವುದು. ಕಲುಷಿತ ನೀರಿನಲ್ಲಿ ಅಜೋಲಾ ಬೆಳೆಸಿದರೆ ಮಾಲಿನ್ಯಕಾರಕಗಳ ಅಪಾಯವಿರುವುದರಿಂದ ಕೇವಲ ಸ್ವಚ್ಛ ನೀರು ಲಭ್ಯವಿರುವ ಸ್ಥಳಗಳನ್ನಷ್ಟೇ ಆಯ್ಕೆ ಮಾಡಲಾಗುತ್ತದೆ. ಫಲಾನುಭವಿಗಳಿಗೆ ಅಜೋಲಾ ಉತ್ಪಾದನೆ, ಕೊಯ್ಲು, ಸ್ವಚ್ಛತೆ, ಸಂಸ್ಕರಣೆ ಹಾಗೂ ಜಾನುವಾರುಗಳಿಗೆ ನೀಡುವ ಕುರಿತು ತಾಂತ್ರಿಕ ತರಬೇತಿ ನೀಡಲಾಗುತ್ತದೆ.

ಯೋಜನೆಯನ್ನು ಗಿಃ-ಉ ಖಂಒ ಉ ಮಾರ್ಗಸೂಚಿಗಳು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಯೋಜನೆಗೊಳಪಟ್ಟು ಅನುಷ್ಠಾನಗೊಳಿಸಲಾಗುತ್ತದೆ. ಪ್ರತಿಯೊಂದು ಘಟಕದ ಫಲಾನುಭವಿಯ ವಿವರಗಳು, ಆಧಾರ್, ಜಿಪಿಎಸ್ ಸ್ಥಳ (ಉಕಖ ಐಂಭಿಚಿಣುಂಟಿ), ಕಾರ್ಯನಿರ್ವಹಣೆಯ ಮೊದಲು ಮತ್ತು ನಂತರದ ಛಾಯಾಚಿತ್ರಗಳನ್ನು ಕಡ್ಡಾಯವಾಗಿ ದಾಖಲಿಸಲಾಗುತ್ತದೆ. ಜಿಲ್ಲಾ ಉಪ ನಿರ್ದೇಶಕರು ಮಾಸಿಕ ವೇಳಾಪಟ್ಟಿ ಸಿದ್ಧಪಡಿಸಿ ಅನುಷ್ಠಾನಗೊಳಿಸಲಿದ್ದು, ಪ್ರತಿ ತಿಂಗಳ 5ನೇ ತಾ-ರೀಖಿನೊಳಗೆ ಪ್ರಗತಿ ವರದಿಯನ್ನು ರಾಜ್ಯ ಕಚೇರಿಗೆ ಸಲ್ಲಿಸಬೇಕೆಂದು ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವೆಗಳ ಇಲಾಖೆಯ ಆಯುಕ್ತರು ತಿಳಿಸಿದ್ದಾರೆ.



# ವಾಲಿಬಾಲ್: ನಾಗನೂರಿನ ಬಸವೇಶ್ವರ ಶಾಲೆ ಚಾಂಪಿಯನ್

■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ತಾಲೂಕಿನ ಆಲಗೂರ ಗ್ರಾಮದ ಮಹಾವೀರ ಅಲ್ಪಸಂಖ್ಯಾತರ ಶಾಲೆಯಲ್ಲಿ ನಡೆದ 202627ನೇ ಸಾಲಿನ 14 ವರ್ಷ ವಯೋಮಿತಿ ಒಳಗಿನ ಹಿರೇಪಡಸಲಗಿ ವಲಯ ಮಟ್ಟದ ಕ್ರೀಡಾಕೂಟದಲ್ಲಿ ನಾಗನೂರಿನ ಶ್ರೀ ಬಸವೇಶ್ವರ ಶಿಕ್ಷಣ ಸಂಸ್ಥೆಯ ಶ್ರೀ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಬಾಲಕರು ವಾಲಿಬಾಲ್ ಸ್ಪರ್ಧೆಯಲ್ಲಿ ಅದ್ಭುತ ಪ್ರದರ್ಶನ ನೀಡಿ ಪ್ರಥಮ ಸ್ಥಾನ ಪಡೆದು ಹೋಬಳಿ ಮಟ್ಟದ ಕ್ರೀಡಾಕೂಟಕ್ಕೆ ಅರ್ಹತೆ ಪಡೆದುಕೊಂಡಿದ್ದಾರೆ.

ಆರಂಭದಿಂದಲೇ ಉತ್ತಮ ಸಂಘಟಿತ ಆಟ ಪ್ರದರ್ಶಿಸಿದ ತಂಡ, ಎದುರಾಳಿ ತಂಡಗಳ ವಿರುದ್ಧ ಆತ್ಮವಿಶ್ವಾಸದಿಂದ ಸೆಣಸಾಡಿ ಅಂತಿಮವಾಗಿ ಪ್ರಥಮ ಸ್ಥಾನವನ್ನು ತನ್ನದಾಗಿಸಿಕೊಂಡಿತು. ತಂಡದ ನಾಯಕ ಸಮರ್ಥ ಗಲಗಲಿ ಅವರ ನಾಯಕತ್ವದಲ್ಲಿ ಸಿದ್ಧಾರ್ಥ ಕಂಬಾರ, ಸಮರ್ಥ ಕಂಬಾರ, ಸಂತೋಷ ಕಂಬಾರ, ನಿಂಗಪ್ಪ ಹಿರೇಕುರಬರ ಹಾಗೂ ಸಾಬು ಕವಟೇಕರ ಉತ್ತಮ ಆಟ ಪ್ರದರ್ಶಿಸಿ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು. ವಿಜೇತ ವಿದ್ಯಾರ್ಥಿಗಳನ್ನು ಶಾಲೆಯ ಆಡಳಿತ ಮಂಡಳಿಯ ಸರ್ವ ಸದಸ್ಯರು, ಮುಖ್ಯಗುರುಗಳು, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಹಿರಿಯ ದೈಹಿಕ ಶಿಕ್ಷಕ ಬಿ.ಜಿ. ಅನಂತಪೂರ, ಮುಖ್ಯಗುರು ಬಿ.ಪಿ. ಬಡಿಗೇರ, ಆರ್.ಆರ್. ಕುಲಕರ್ಣಿ, ಲಿಗಾಡಿ ಗುರುಗಳು, ರಾಜು ತೇಲಿ, ಪ್ರವೀಣ ನಾವಿ, ಸಾಬು ಜಂಬಗಿ, ಶಿಕ್ಷಕಿಯರಾದ ಪಿ.ವಿ. ಮಾಳಿ, ಜೆ.ಎಚ್. ಕಡಕೋಳ, ಆರ್. ಆರ್ ಪೂಜಾರಿ ಸೇರಿದಂತೆ ಶಾಲೆಯ ಶಿಕ್ಷಕ ವೃಂದ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026ನೇ ಸಾಲಿನ ರಾಜ್ಯಮಟ್ಟದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ನೀಡಲಾಗುವ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಪರಿಶಿಷ್ಟ ಪಂಗಡದ ಸಾಧಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಶೈಕ್ಷಣಿಕ, ಸಾಮಾಜಿಕ, ಸಾಹಿತ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿ, ಪರಿಶಿಷ್ಟ ಪಂಗಡದ ಜನಾಂಗದ ಶ್ರೇಯೋಭಿವೃದ್ಧಿಗೆ ಶ್ರಮಿಸಿರುವ ಅರ್ಹ ಸಾಧಕರು ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹರು ತಮ್ಮ ಅರ್ಜಿಯನ್ನು ಸೆ.30ರ ಸಂಜೆ 5 ಗಂಟೆಯೊಳಗೆ ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಸಹಾಯಕ ನಿರ್ದೇಶಕರ, ಸಮಾಜ ಕಲ್ಯಾಣ ಇಲಾಖೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಸಮಸ್ಯೆಗಳನ್ನು ಸಂಯಮದಿಂದ ಎದುರಿಸಿ

■ ಉದಯರಶ್ಮಿ ದಿನಪತ್ರಿಕೆ

■ ಜಿಲ್ಲಾ ಕಾರಾಗೃಹದಲ್ಲಿ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆ । ಕೇಂದ್ರ ಕಾರಾಗೃಹದ ಅಧೀಕ್ಷಕ ಮಲ್ಲಿಕಾರ್ಜುನ ಮಾಳಿ ಅಭಿಮತ

ವಿಜಯಪುರ: ಜೀವನದಲ್ಲಿ ಬರುವ ಸಮಸ್ಯೆಗಳನ್ನು ಮನುಷ್ಯ ಜ್ಞಾನವಂತನಾಗಿ ಶಾಂತಿ ಹಾಗೂ ಸಂಯಮದಿಂದ ಎದುರಿಸಿ ಯಶಸ್ಸು ಪಡೆಯಬೇಕು ಎಂದು ಕೇಂದ್ರ ಕಾರಾಗೃಹದ ಅಧೀಕ್ಷಕ ಮಲ್ಲಿಕಾರ್ಜುನ ಮಾಳಿ ಹೇಳಿದರು.

ನಗರದ ಜಿಲ್ಲಾ ಕಾರಾಗೃಹದಲ್ಲಿ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಉದ್ವೇಗದಿಂದ ಅಜ್ಞಾನಿಗಳಾಗಿ ಕೆಟ್ಟ ಕೃತ್ಯ ಎಸಗಿ ಜೀವನ ವ್ಯರ್ಥ ಮಾಡಿಕೊಳ್ಳಬಾರದು ಎಂದರು.

ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಎಂ.ಬಿ. ಮೊರಟಗಿ ಮಾತನಾಡಿ, ಮನುಷ್ಯ ಮೂಲತಃ ವಿಚಾರವಾದಿಯಾಗಿದ್ದು, ಅದರೊಂದಿಗೆ ಶಿಕ್ಷಣವಂತರಾಗಿ ತನ್ನ ವಿಚಾರಗಳನ್ನು ವಿಸ್ತರಿಸಿಕೊಳ್ಳಲು ಅಕ್ಷರ ಜ್ಞಾನ ಅತ್ಯಂತ ಅವಶ್ಯಕವಾಗಿದೆ. ಸಾಕ್ಷರರಾಗುವುದು ನಮ್ಮೆಲ್ಲರ ಮೂಲ ಕರ್ತವ್ಯ ಎಂದರು.

ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ (ಡಯಟ್) ಅಭಿವೃದ್ಧಿ ಉಪನಿರ್ದೇಶಕ ಸೈಯಿದಾ ಅನ್ನೀಸ್ ಮಾತನಾಡಿ, ಮಾನಸಿಕ ಒತ್ತಡದಿಂದ ಆದಂತಹ ಕೃತ್ಯಗಳಿಂದ ಮನುಷ್ಯ ತನ್ನ ಜೀವನದಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಒತ್ತಡದಿಂದ ಹೊರಬರಲು ಓದು–ಬರಹ ಹಾಗೂ ಜ್ಞಾನಿಗಳ ವಿಚಾರಗಳನ್ನು ತಿಳಿದುಕೊಂಡು ಜೀವನವನ್ನು ಸುಂದರಮಯವಾಗಿಸಿಕೊಳ್ಳುವುದು ನಮ್ಮ ಆದ್ಯ ಕರ್ತವ್ಯ ಎಂದರು.

ಕಾರ್ಯಕ್ರಮದಲ್ಲಿ ಬಂಧಿಗಳಿಗೆ ಸಾಕ್ಷರತಾ ಪ್ರತಿಜ್ಞಾವಿಧಿ ಬೋಧಿಸಲಾಯಿತು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಇದೇ ವೇಳೆ ಬಹುಮಾನಗಳನ್ನು ವಿತರಿಸಲಾಯಿತು. ಜಿ.ಎಸ್. ಕಾಪಸೆ ಕಾರ್ಯಕ್ರಮ ನಿರೂಪಿಸಿದರು. ಕಾರಾಗೃಹ ಅಧಿಕಾರಿಗಳು, ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## 15ರ ಸಂಭ್ರಮದಲ್ಲಿ ಜಮಖಂಡಿ ತಾಲೂಕು ಛಾಯಾಗ್ರಾಹಕರ ಸಂಘ

# 13ರಂದು ವಾರ್ಷಿಕೋತ್ಸವ, ಅಧಿಕಾರ ಹಸ್ತಾಂತರ

■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ತಾಲೂಕಾ ಛಾಯಾಚಿತ್ರಗ್ರಾಹಕರ ಸಂಘದ 15ನೇ ವಾರ್ಷಿಕೋತ್ಸವ ಹಾಗೂ ಅಧಿಕಾರ ಹಸ್ತಾಂತರ ಸಮಾರಂಭ ಸೆ.13ರಂದು ಬೆಳಿಗ್ಗೆ 10ಕ್ಕೆ ನಗರದ ಬಸ್ ನಿಲ್ದಾಣ ರಸ್ತೆಯ ಬಸವ ಭವನದಲ್ಲಿ ನಡೆಯಲಿದೆ ಎಂದು ಸಂಘದ ಅಧ್ಯಕ್ಷ ಹಾಸಿಮ್ ಅ. ಜಮಖಂಡಿ ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಛಾಯಾಚಿತ್ರ ಸ್ಪರ್ಧೆ, ಪ್ರತಿಭಾ ಪುರಸ್ಕಾರ ಹಾಗೂ ಛಾಯಾಗ್ರಹಣ ಕ್ಷೇತ್ರಕ್ಕೆ ಅಗತ್ಯವಿರುವ ವಿವಿಧ ಉಪಕರಣಗಳು ಮತ್ತು ಸೇವೆಗಳ ವಿಶೇಷ ಮಳಿಗೆಗಳನ್ನು ಆಯೋಜಿಸಲಾಗಿದೆ.

ಶ್ರೀ ರಾಚೋಟೇಶ್ವರ ವಿರಕ್ತಮಠ, ಮುತ್ತೂರಿನ ಪರಮಪೂಜ್ಯ ಶ್ರೀ ಗುರುಸಿದ್ದೇಶ್ವರ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಶಾಸಕ ನಾಡೋಜ ಜಗದೀಶ ಗುಡಗುಂಟಿ ಸಮಾರಂಭ ಉದ್ಘಾಟಿಸಲಿದ್ದಾರೆ. ಕರ್ನಾಟಕ ಫೋಟೋಗ್ರಾಫರ್ಸ್ ಅಸೋಸಿಯೇಷನ್ ಅಧ್ಯಕ್ಷ ನಾಗೇಶ ಹೆಚ್.ಎಸ್. ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿರುವರು. ಇದೇ ವೇಳೆ ನೂತನ ಪದಾಧಿಕಾರಿಗಳಿಗೆ ಅಧಿಕಾರ ಹಸ್ತಾಂತರ ನಡೆಯಲಿದೆ. ಅಧ್ಯಕ್ಷರಾಗಿ ಅಶೋಕ ಜೋಶಿ, ಉಪಾಧ್ಯಕ್ಷರಾಗಿ ಮುಜಾಹಿದ್ ಉ. ದಿಲಾವರ, ಕಾರ್ಯದರ್ಶಿಯಾಗಿ ಈರನಗೌಡ ರಾ. ಪಾಟೀಲ ಹಾಗೂ



ಖಜಾಂಚಿಯಾಗಿ ಮಲ್ಲಪ್ಪ ಬಿ. ಸಿದ್ದನವರ ಅಧಿಕಾರ ಸ್ವೀಕರಿಸಲಿದ್ದಾರೆ. ತೊದಲಬಾಗಿ ವಲಯದ ಅಧ್ಯಕ್ಷರಾಗಿ ಲಕ್ಷ್ಮಣ ಪವಾರ, ಸಾವಳಗಿ ವಲಯಕ್ಕೆ ಗುರುಶಾಂತ್ ಪಾಟೀಲ್, ಕೊಣ್ಣೂರ ವಲಯಕ್ಕೆ ತನವಪ್ಪ ಕವಟಗೊಪ್ಪ ಹಾಗೂ ಹಿಪ್ಪರಗಿ ವಲಯಕ್ಕೆ ರಮೇಶ ಗಲಗಲಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ.

ಛಾಯಾಗ್ರಹಣ ಕ್ಷೇತ್ರದವರು, ಸಂಘದ ಸದಸ್ಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

# ಶಿಕ್ಷಕರಾದವರು ಸ್ವಾರ್ಥಕ್ಕಿಂತ ಪರಾರ್ಥಕ್ಕಾಗಿ ಶ್ರಮಿಸಬೇಕು :ಉಪ್ಪಾರ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಶಿಕ್ಷಕ ವೃತ್ತಿ ಪವಿತ್ರ ವೃತಿ ಶಿಕ್ಷಕರಾದವರು ಸ್ವಾರ್ಥಕ್ಕಿಂತ ಪರಾರ್ಥಕ್ಕಾಗಿ ಶ್ರಮಿಸಬೇಕು ಎಂದು ಪ ಪೂ ಶಿಕ್ಷಣ ಇಲಾಖೆಯ ಉಪನರ್ದೇಶಕ ಕೆ ಎಸ್ ಉಪ್ಪಾರ ಹೇಳಿದರು

ಅವರು ಪಟ್ಟಣದ ಪಿ ಇ ಎಸ್ ಶಿಕ್ಷಣ ಸಂಸ್ಥೆ ಹಾಗೂ ಲಯನ್ಸ್ ಕ್ಲಬ್ ಸಿಂದಗಿ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿರುವ ಶಿಕ್ಷಕರ ದಿನಾಚರಣೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಆದರ್ಶ ಶಿಕ್ಷರಾಗಬೇಕಾದವರು ಮೊದಲು ಉತ್ತಮ ಆದರ್ಶ ಗುಣಗಳಿಂದ ವಿದ್ಯಾದಾನ ಮಾಡಿ ಮಾದರಿ ಶಿಕ್ಷರಾಗಬೇಕು ಅಂದಾಗ ಮಾತ್ರ ಆದರ್ಶ ಶಿಕ್ಷರಾಗಲು ಸಾಧ್ಯ ಎಂದರು.

ಇದೇ ಸಂದರ್ಭದಲ್ಲಿ ವಿವಿಧ ತಾಲೂಕಿನಿಂದ ಆಯ್ದ ಸುಮಾರು 10 ಕ್ಕೂ ಅಧಿಕ ಪ್ರೌಢಶಾಲಾ ಶಿಕ್ಷರಿಗೆ "ಆದರ್ಶ ಶಿಕ್ಷಕ" ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಲಯನ್ಸ್ ಕ್ಲಬ್ ಜಿಲ್ಲಾ ಗವ್ವರ್ನರ ಬೆಲಗವಿಯ ರಾಜಶೇಖರ ಹಿರೇಮಠ ಸಮಾರಂಭ ಉದ್ದೇಶಿಸಿ ಮಾತನಾಡಿದರು.

ಆದರ್ಶ ಶಿಕ್ಷಕ ಗೌರವಕ್ಕೆ ಭಾಜನಾರಾದ ಶಿಕ್ಷಕ ಎ ಎಸ್ ವಾಲಿಕಾರ, ಪ್ರಶಸ್ತಿಗಳಿಗಾಗಿ ಲಾಭಿ ನಡೆಸುವ ಇಂದಿನ ದಿನಮಾನದಲ್ಲಿ ನಮ್ಮನ್ನು ಗುರುತಿಸಿ "ಆದರ್ಶ ಶಿಕ್ಷಕ " ಪುರಸ್ಕಾರ ನೀಡಿದ್ದು ಲಯನ್ಸ್ ಕ್ಲಬ್ ಹಾಗೂ ಪಿ ಇ ಎಸ್




ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದರು.

ವಿಜಯಪುರದ ಅಂಜುಮನ್ ಪಿ.ಯು. ಕಾಲೇಜಿನ ಉಪನ್ಯಾಸಕ ಹಾಗು ಹಾಕಿ ಕೋಚ್ ಎಸ್. ಕೆ. ಇನಾಮದಾರ, ಉಪನ್ಯಾಸಕ ಎಂ.ಎನ್. ಅಜ್ಜಪ್ಪ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಸಿಂದಗಿ ತಾಲೂಕಾ ಲಯನ್ಸ್ ಕ್ಲಬ್ ಅಧ್ಯಕ್ಷ ಎಂ.ಜೆ. ಎಫ್. ಲಾ. ಅಂಬರೀಶ ಬಿರಾದಾರ ಅಧ್ಯಕ್ಷತೆ ವಹಿಸಿದ್ದರು. ಪಿ.ಇ.ಎಸ್. ಸಂಸ್ಥೆಯ ಕಾರ್ಯದರ್ಶಿ ಲಾ. ಬಿ.ಪಿ. ಕರ್ಜಗಿ, ಲಯನ್ಸ್ ಕ್ಲಬ್ ಕಾರ್ಯದರ್ಶಿ ಲಾ. ಆಯ್.ಬಿ. ಬಿರಾದಾರ, ಎಂ.ಜೆ.ಎಫ್. ಕೆ.ಎಚ್. ಸೋಮಾಪೂರ, ಲಾ. ಎಸ್.ಎಸ್. ಪಾಟೀಲ, ಲಾ. ರಾಚಪ್ಪ ವಾರದ ಲಾ.ಎಸ್.ಬಿ. ಚಾಗಶೆಟ್ಟಿ, ಲಾ. ಮುತ್ತು ಮುಂಡೇವಾಡಗಿ, ಶ್ರೀಮತಿ ಅರ್ಪಿತಾ ಅ. ಬಿರಾದಾರ, ಪ್ರಾಚಾರ್ಯರಾದ ಆರ್.ಎಸ್. ಧರಿಗೊಂಡ, ಜಿ.ಎಸ್. ಕಡಣಿ ಉಪಸ್ಥಿತರಿದ್ದರು.

ಲಯನ್ ಖಜಾಂಚಿಗಳಾದ ಲಾ. ಆರ್.ಎಂ. ಪಾಟೀಲ ಕಾರ್ಯಕ್ರಮ ನಿರೂಪಣೆ ಮಾಡಿದರು.

## ಅದಮ್ಯ ಚೈತನ್ಯ ಸಂಸ್ಥೆಯ ಪ್ರಮುಖರಾದ ತೇಜಸ್ವಿನಿ ಅನಂತಕುಮಾರ್ ಸಲಹೆ

# ಪ್ಲಾಸ್ಟಿಕ್ ಮುಕ್ತ ಅಡುಗೆಮನೆ ಮಹಿಳೆಯರ ಸಂಕಲ್ಪವಾಗಬೇಕು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪ್ಲಾಸ್ಟಿಕ್ ಮುಕ್ತ ಅಡುಗೆ ಮನೆ ರೂಪಿಸುವುದು ಮಹಿಳೆಯರ ಸಂಕಲ್ಪವಾಗಬೇಕು ಎಂದು ಅದಮ್ಯ ಚೈತನ್ಯ ಸಂಸ್ಥೆಯ ಪ್ರಮುಖರಾದ ತೇಜಸ್ವಿನಿ ಅನಂತಕುಮಾರ್ ಹೇಳಿದರು.

ವಿಜಯಪುರದ ಶ್ರೀ ಶಿವ ಚಿದಂಬರ ದೇವಾಲಯದಲ್ಲಿ ಶ್ರೀ ಚಿದಂಬರ ಸೇವಾ ಸಮಿತಿ ನೇತೃತ್ವದಲ್ಲಿ ಶ್ರೀ ಶಿವಚಿದಂಬರ ಮಹಾಸ್ವಾಮಿಯ ಅಪ್ರಕಾಶಿತ ಲೀಲಾಗ್ರಂಥ–'ದ ಪಠಣದ 50 ನೇ ವರ್ಷದ ಸುವರ್ಣ ಮಹೋತ್ಸವ ಅಂಗವಾಗಿ ನಡೆದ ಮಹಿಳಾ ಗೋಷ್ಠಿಯ ಅಧ್ಯಕ್ಷತೆ ವಹಿಸಿ ಅನೇಕ ವಿಷಯಗಳ ಮೇಲೆ ಬೆಳಕು ಚೆಲ್ಲಿದ ಅವರು, ಪ್ಲಾಸ್ಟಿಕ್ ನಿಸರ್ಗಕ್ಕೆ ಅತ್ಯಂತ ಅಪಾಯಕಾರಿ, ಪ್ಲಾಸ್ಟಿಕ ತನ್ನ ವಿಷಕಾರಿ ಅಂಶವನ್ನು ಹೊರ ಸೂಸುತ್ತಲೇ ಇರುತ್ತದೆ, ಪ್ಲಾಸ್ಟಿಕ್ ಒಂದು ಅಪಾಯಕಾರಿ ಅಂಶ, ಹೀಗಾಗಿ ಪ್ಲಾಸ್ಟಿಕ್ ಮುಕ್ತ ಸಮಾಜ ನಿರ್ಮಾಣ ಪ್ರತಿಯೊಬ್ಬರ ಸಂಕಲ್ಪವಾಗಬೇಕು, ಈ ಕಾರ್ಯ ಯಶಸ್ವಿಯಾಗಲು ಮೊದಲು ನಮ್ಮ ಅಡುಗೆ ಮನೆ ಪ್ಲಾಸ್ಟಿಕ್ ಮುಕ್ತವಾಗಬೇಕು, ಈ ಕಾರ್ಯ ಸಾಧ್ಯವಾಗಬೇಕಾಗಿರುವುದು ಮಹಿಳೆಯರಿಂದ ಎಂದರು. ಮಹಿಳೆ ಒಂದು ಶ್ರೇಷ್ಠ ಶಕ್ತಿ, ಮಹಿಳೆ ಸವಾಲುಗಳಿಂದ ಹೆದರದೇ ಅವುಗಳನ್ನು ಸಮರ್ಥವಾಗಿ ಎದುರಿಸಿ ಮುನ್ನಡೆಯಬೇಕು ಎಂದರು.




ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಮಾತನಾಡಿ, ಮಕ್ಕಳಲ್ಲಿ ಸಂಸ್ಕಾರ ಬಿತ್ತುವ ಮಹತ್ತರ ಹೊಣೆಗಾರಿಕೆ ತಾಯಂದಿರ ಮೇಲಿದೆ, ಹೀಗಾಗಿ ಬಾಲ್ಯದಲ್ಲಿಯೇ ಮಕ್ಕಳಿಗೆ ನಮ್ಮ ಪವಿತ್ರ ಹಿಂದೂತ್ವದ ಮೌಲ್ಯಗಳನ್ನು ಮಕ್ಕಳಲ್ಲಿ ಬಿತ್ತುವ ಕಾರ್ಯ ಮಾಡಬೇಕು ಎಂದು ಕರೆ ನೀಡಿದರು.

ಸಿಂದಗಿ ಶ್ರೀ ಭೀಮಾಶಂಕರ ಮಠದ ಶ್ರೀ ಸದಾಶಿವ ಅಪ್ಪಯ್ಯ ಮಹಾಸ್ವಾಮೀಜಿ, ಶ್ರೀ ವಲ್ಲಭ ಸ್ವಾಮೀಜಿ, ಶ್ರೀ ಸದಾನಂದ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು.

ಶಿಕ್ಷಣ ಹಾಗೂ ಅಧ್ಯಾತ್ಮಿಕತೆ ಎಂಬ ವಿಷಯಗಳ ಕುರಿತು ಡಾ.ರಾಘವೇಂದ್ರ ಕುಲಕರ್ಣಿ ಉಪನ್ಯಾಸ ಮಂಡಿಸಿದರು.

ಬಾಗಲಕೋಟೆ ತೋಟಗಾರಿಕೆ ವಿವಿ ಕುಲಸಚಿವ ಬಾಲಾಜಿ ಕುಲಕರ್ಣಿ ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ, ಶ್ರೀ ಚಿದಂಬರ ಸೇವಾ ಸಮಿತಿ ಅಧ್ಯಕ್ಷ ಲಕ್ಷ್ಮೀಕಾಂತ ಕುಲಕರ್ಣಿ, ಉಪಾಧ್ಯಕ್ಷ ಅಂಬಾದಾಸ ಜೋಶಿ, ಕಾರ್ಯದರ್ಶಿ ವೇದಮೂರ್ತಿ ವೆಂಕಟೇಶ್ ಭಟ್ ಅಗ್ನಿಹೋತ್ರಿ ವೆಂಕಟೇಶ ಜೋಶಿ, ವಿ.ಸಿ. ಕುಲಕರ್ಣಿ, ಸಿ.ಕೆ. ಕುಲಕರ್ಣಿ, ವಿಜಯ ಜೋಶಿ, ವೆಂಕಟೇಶ ಜೋಶಿ, ಮುಕುಂದ ಹಂಗರಗಿ. ಚಿದಂಬರ ಜೋಶಿ ರೊಳ್ಳಿ ಸುಧೀಂದ್ರ ಕುಲಕರ್ಣಿ ವೆಂಕಟೇಶ್ ಜೋಶಿ ಹಡ್ಲಿಗೇರಿ ಉಪೇಂದ್ರ ದೇಸಾಯಿ ಪಾಲ್ಗೊಂಡಿದ್ದರು.

# ತಾಲೂಕು ಹಾಗೂ ಹೋಬಳಿ ಮಟ್ಟದ ಪ್ರಜಾಸೇವೆ ಆಂದೋಲನ ಸಭೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಜನತೆಯ ಅಹವಾಲುಗಳನ್ನು ಆಲಿಸಿ, ಮನೆ ಬಾಗಿಲಿನಲ್ಲಿಯೇ ಸಮಸ್ಯೆಗಳಿಗೆ ಪರಿಹಾರ ನೀಡುವನಿಟ್ಟಿನಲ್ಲಿತಾಲೂಕುಮತ್ತುಹೋಬಳಿ ಮಟ್ಟದಲ್ಲಿ ಪ್ರಜಾಸೇವೆ ಆಂದೋಲನ ಸಭೆಗಳನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ ಅವರು ತಿಳಿಸಿದ್ದಾರೆ.

ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ ಎಂ.ಬಿ. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಹಾಗೂ ಜಿಲ್ಲೆಯ ವಿವಿಧ ವಿಧಾನಸಭಾ ಕ್ಷೇತ್ರಗಳ ಶಾಸಕರ ನೇತೃತ್ವದಲ್ಲಿ ಈ ಸಭೆಗಳು ಜರುಗಲಿವೆ.

ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಎರಡನೇ ತಾಲೂಕು ಮಟ್ಟದ ಸಭೆಯು ಶಾಸಕರಾದ ಅಶೋಕ ಮನಗೂಳಿ ಅವರ ನೇತೃತ್ವದಲ್ಲಿ ಸಿಂದಗಿ ವಿಧಾನಸಭಾ ಕ್ಷೇತ್ರದ ಸಿಂದಗಿಯ ಬಸವ ಮಂಟಪದಲ್ಲಿ ಸೆಪ್ಟೆಂಬರ್ 19ರ ಶನಿವಾರ ಬೆಳಿಗ್ಗೆ 10:30ಕ್ಕೆ ನಡೆಯಲಿದೆ.

ಇದರೊಂದಿಗೆ ವಿವಿಧ ಕ್ಷೇತ್ರಗಳ ಶಾಸಕರ ನೇತೃತ್ವದಲ್ಲಿ ತಾಲೂಕಾ ಹಾಗೂ ಹೋಬಳಿ ಮಟ್ಟದ ಪ್ರಜಾ ಸೇವೆ ಆಂದೋಲನ ಸಭೆಗಳ ವೇಳಾಪಟ್ಟಿಯಂತೆ, ಮುದ್ದೇಬಿಹಾಳ ವಿಧಾನಸಭಾ ಕ್ಷೇತ್ರದಲ್ಲಿ ತಾಳಿಕೋಟೆಯ ವಿಜಯಪುರ ರಸ್ತೆಯಲ್ಲಿರುವ ಸಂಗಮೇಶ್ವರ ಸಭಾ ಭವನದಲ್ಲಿ ಸೆಪ್ಟೆಂಬರ್ 12ರ ಶನಿವಾರ ಬೆಳಿಗ್ಗೆ 10:30ಕ್ಕೆ, ಢವಳಗಿ ಹೋಬಳಿಯ ಬಸರಕೋಡ ಗ್ರಾಮದ ಪವಾಡ ಬಸವೇಶ್ವರ ಸಭಾಭವನದಲ್ಲಿ ಸೆಪ್ಟೆಂಬರ್ 19ರ ಶನಿವಾರ ಬೆಳಿಗ್ಗೆ 10:30ಕ್ಕೆ ಹಾಗೂ ಮುದ್ದೇಬಿಹಾಳದ ಕರ್ನಾಟಕ ಕೋ–ಆಪರೇಟಿವ್ ಎ.ಪಿ. ಎಂ.ಸಿ ಮಂಗಲ ಕಾರ್ಯಾಲಯದಲ್ಲಿ ಸೆಪ್ಟೆಂಬರ್ 26ರ ಶನಿವಾರ ಬೆಳಿಗ್ಗೆ 10:30ಕ್ಕೆ ಶಾಸಕರಾದ ಅಪ್ಪಾಜಿ ಸಿ.ಎಸ್. ನಾಡಗೌಡ ಅವರ ಅಧ್ಯಕ್ಷತೆಯಲ್ಲಿ ಹೋಬಳಿ ಮಟ್ಟದ ಪ್ರಜಾಸೇವೆ ಆಂದೋಲನ ಸಭೆಗಳು ನಡೆಯಲಿವೆ.



ದೇವರಹಿಪ್ಪರಗಿವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಸಾತಿಹಾಳ ಗ್ರಾಮ ಪಂಚಾಯತ ಕಾರ್ಯಾಲಯದಲ್ಲಿ ಸೆಪ್ಟೆಂಬರ್ 12ರ ಶನಿವಾರ ಬೆಳಿಗ್ಗೆ 10:30ಕ್ಕೆ, ಕೊರವಾರ ಗ್ರಾಮ ಪಂಚಾಯತ ಕಾರ್ಯಾಲಯದಲ್ಲಿ ಸೆಪ್ಟೆಂಬರ್ 19ರ ಶನಿವಾರ ಬೆಳಿಗ್ಗೆ 10:30ಕ್ಕೆ ಹಾಗೂ ಮುಳಸಾವಳಗಿಯ ಮಲ್ಲಿಕಾರ್ಜುನ ದೇವಸ್ಥಾನದ ಆವರಣದಲ್ಲಿ ಸೆಪ್ಟೆಂಬರ್ 26ರ ಶನಿವಾರ ಬೆಳಿಗ್ಗೆ 10:30ಕ್ಕೆ ಶಾಸಕ ರಾಜುಗೌಡ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಹೋಬಳಿ ಮಟ್ಟದ ಪ್ರಜಾಸೇವ ಆಂದೋಲನ ಸಭೆ ನಡೆಯಲಿದೆ.

ಬಸವನಬಾಗೇವಾಡಿ ವಿಧಾನಸಭಾ ಕ್ಷೇತ್ರದಲ್ಲಿ ಕೋಲಾರದ ವಾರ್ಡ್ ನಂ. 12ರ ಡಾ.ಬಿ.ಆರ್. ಅಂಬೇಡ್ಕರ್ ಸಮುದಾಯ ಭವನದಲ್ಲಿ ಸೆಪ್ಟೆಂಬರ್ 19ರ ಶನಿವಾರ ಬೆಳಿಗ್ಗೆ 10:30ಕ್ಕೆ ಹಾಗೂ ನಿಡಗುಂದಿಯ ಕಮದಾಳ ಪುನರ್ ವಸತಿ ಕೇಂದ್ರದ ಶ್ರೀ ಮುದ್ದೇಶ್ವರ ದೇವಸ್ಥಾನ ಸಭಾ ಭವನದ ಕಲ್ಯಾಣ ಮಂಟಪದಲ್ಲಿ ಸೆಪ್ಟೆಂಬರ್ 26ರ ಶನಿವಾರ ಬೆಳಿಗ್ಗೆ 10:30ಕ್ಕೆ ಶಾಸಕರಾದ ಶಿವಾನಂದ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಹೋಬಳಿ ಮಟ್ಟದ ಸಭೆ ನಿಗದಿಪಡಿಸಲಾಗಿದೆ.

ವಿಜಯಪುರ ನಗರ ಕ್ಷೇತ್ರದಲ್ಲಿ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಸೆಪ್ಟೆಂಬರ್ 19ರ ಶನಿವಾರ ಬೆಳಿಗ್ಗೆ 10:30ಕ್ಕೆ ತಾಲೂಕು ಮಟ್ಟದ ಪ್ರಜಾಸೇವೆ ಆಂದೋಲನ ಸಭೆಯು ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ.

ನಾಗಠಾಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ನಾಗಠಾಣ ಗ್ರಾಮ ಪಂಚಾಯತ ಕಾರ್ಯಾಲಯದ ಸಭಾಭವನದಲ್ಲಿ ಸೆಪ್ಟೆಂಬರ್ 12ರ ಶನಿವಾರ ಬೆಳಿಗ್ಗೆ 10:30ಕ್ಕೆ, ಹಲಸಂಗಿಯ ಬಜಾರ್ ರಸ್ತೆಯ ಮಲ್ಲಿಕಾರ್ಜುನ ದೇವಸ್ಥಾನದಲ್ಲಿ ಸೆಪ್ಟೆಂಬರ್ 19ರ ಶನಿವಾರ ಬೆಳಿಗ್ಗೆ 10:30ಕ್ಕೆ ಹಾಗೂ ಹಡಗಲಿ ಗ್ರಾಮ ಪಂಚಾಯತ ಕಾರ್ಯಾಲಯದಲ್ಲಿ ಸೆಪ್ಟೆಂಬರ್ 26ರ ಶನಿವಾರ ಬೆಳಿಗ್ಗೆ 10:30ಕ್ಕೆ ಶಾಸಕ ವಿಠಲ ಕಟಕದೊಂಡ ಅವರ ಅಧ್ಯಕ್ಷತೆಯಲ್ಲಿ ತಾಲೂಕಾ ಮಟ್ಟದ ಸಭೆ ನಡೆಯಲಿವೆ.

ಇಂಡಿ ವಿಧಾನಸಭಾ ಕ್ಷೇತ್ರದಲ್ಲಿ ಶಾಸಕ ಯಶವಂತ್ರಾಯಗೌಡ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಅಥರ್ಗಾ ಗ್ರಾಮ ಪಂಚಾಯತ ಕಾರ್ಯಾಲಯದ ಸಭಾ ಭವನದಲ್ಲಿ ಸೆಪ್ಟೆಂಬರ್ 12ರ ಶನಿವಾರ ಬೆಳಿಗ್ಗೆ 10:30ಕ್ಕೆ, ಸಾಲೋಟಗಿಯ ಶ್ರೀ ಶಿವಯೋಗೇಶ್ವರ ದೇವಸ್ಥಾನ ಆವರಣದಲ್ಲಿ ಸೆಪ್ಟೆಂಬರ್ 19ರ ಶನಿವಾರ ಬೆಳಿಗ್ಗೆ 10:30ಕ್ಕೆ ಹಾಗೂ ಹೊರ್ತಿ ಗ್ರಾಮ ಪಂಚಾಯತ ಕಾರ್ಯಾಲಯದ ಸಭಾ ಭವನದಲ್ಲಿ ಸೆಪ್ಟೆಂಬರ್ 26ರ ಶನಿವಾರ ಬೆಳಿಗ್ಗೆ 10:30ಕ್ಕೆ ಹೋಬಳಿ ಮಟ್ಟದ ಪ್ರಜಾಸೇವಾ ಆಂದೋಲನ ಸಭೆ ನಡೆಯಲಿವೆ.

ಸಿಂದಗಿ ವಿಧಾನಸಭಾ ಕ್ಷೇತ್ರದಲ್ಲಿ ಸಿಂದಗಿ ತಾಲೂಕಿನ ಯರಗಲ್ ಬಿ.ಕೆಯಲ್ಲಿ ಸೆಪ್ಟೆಂಬರ್ 12ರ ಶನಿವಾರ ಬೆಳಿಗ್ಗೆ 10:30ಕ್ಕೆ ಹಾಗೂ ಆಲಮೇಲ ತಾಲೂಕಿನ ಮಲಘಾಣ ಗ್ರಾಮ ಪಂಚಾಯತ ಕಾರ್ಯಾಲಯದಲ್ಲಿ ಸೆಪ್ಟೆಂಬರ್ 26ರ ಶನಿವಾರ ಬೆಳಿಗ್ಗೆ 10:30ಕ್ಕೆ ಹೋಬಳಿ ಮಟ್ಟದ ಸಭೆ ಶಾಸಕ ಅಶೋಕ ಎಂ. ಮನಗೂಳಿ ಅವರ ಅಧ್ಯಕ್ಷತೆಯಲ್ಲಿ ನಡೆಯುತ್ತಿದ್ದು, ಸಾರ್ವಜನಿಕರು ಈ ಸಭೆಗಳಲ್ಲಿ ಭಾಗವಹಿಸಿ, ತಮ್ಮ ಅಹವಾಲು ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳ ಸವಲತ್ತುಗಳನ್ನು ಪಡೆದುಕೊಳ್ಳಲು ಅರ್ಜಿ ಸಲ್ಲಿಸಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವಂತೆಯೂ ಹಾಗೂ ಆಯಾ ತಾಲೂಕು ಮತ್ತು ಜಿಲ್ಲಾ ಮಟ್ಟದ ನಿಯೋಜಿತ ಅಧಿಕಾರಿಗಳು ನಿಗದಿತ ದಿನಾಂಕ ಮತ್ತು ಸಮಯಕ್ಕೆ ಸರಿಯಾಗಿ ಸಭೆಗಳಲ್ಲಿ ಕಡ್ಡಾಯವಾಗಿ ಹಾಜರಿರಬೇಕೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR